ವಿಜಯಪುರ | ಸಂಪುಟ 02 | ಸಂಚಿಕೆ 206 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಗುರುವಾರ, ಅಕ್ಟೋಬರ್ 10, 2024



" ಕಾಂಗ್ರೆಸ್ ಸರ್ಕಾರದ ನಾಲ್ವರು ಸಚಿವರು ನನ್ನ ಬಗ್ಗೆ ಕಳಂಕ ಸೃಷ್ಟಿಸಲು ಹಳೆಯ ಪ್ರಕರಣದ ಬಗ್ಗೆ ಮಾತನಾಡಿದ್ದಾರೆ. ಇದರಲ್ಲಿ ನೈತಿಕತೆಯ ಪ್ರಶ್ನೆ ಎತ್ತಿದ್ದಾರೆ. ಸಿಎಂ ಸಿದ್ದರಾಮಯ್ಯನವರ ಮುಡಾ ಹಗರಣದಲ್ಲಿ ಅರಿಶಿನ–ಕುಂಕುಮದ ಮೂಲಕ ಭೂಮಿ ಬಂದಿದೆ. ಆದರೆ ನಾನು ಹಣ ಕೊಟ್ಟು ಭೂಮಿ ಖರೀದಿ ಮಾಡಿದ್ದೇನೆ."

■ ಆರ್.ಅಶೋಕ್
ವಿದಾನಸಭೆ ವಿಪಕ್ಷ ನಾಯಕರು

## ಜಿಲ್ಲಾಸ್ಪತ್ರೆಗೆ ಭೇಟಿ ನೀಡಿದ ಡಿಸಿ ಟಿ. ಭೂಬಾಲನ್



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಬುಧವಾರ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ ವಿವಿಧ ಕಾಮಗಾರಿಗಳ ಪರಿಶೀಲನೆ ಮಾಡಿದರು.

ಈ ವೇಳೆ ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ಶಿವಾನಂದ ಮಾಸ್ತಿಹೊಳಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಈರಣ್ಣ ಆಶಾಪೂರ, ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕರಾದ ಜಿ.ಎನ್. ಮಲಜಿ, ಜಿಲ್ಲಾ ಆಸ್ಪತ್ರೆಯ ಸಹಾಯಕ ಆಡಳಿತ ಅಧಿಕಾರಿ ಸಿಂದಗಿಕರ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

## ಬಹುಕೋಟಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದ "ಮಾಸ್ಟರ್‌ಮೈಂಡ್" ಕಾಂಗ್ರೆಸ್ ಶಾಸಕ ಬಿ ನಾಗೇಂದ್ರ | ಚಾರ್ಜ್ ಶೀಟ್ ಅನ್ನು ಪರಿಗಣನೆಗೆ ತೆಗೆದುಕೊಂಡ ನ್ಯಾಯಾಲಯ

# ಬಿ. ನಾಗೇಂದ್ರ ವಾಲ್ಮೀಕಿ ಹಗರಣದ ಮಾಸ್ಟರ್ ಮೈಂಡ್: ಇಡಿ

ನವದೆಹಲಿ: ಕಾಂಗ್ರೆಸ್ ಶಾಸಕ ಬಿ ನಾಗೇಂದ್ರ ಅವರು ಬಹುಕೋಟಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದ "ಮಾಸ್ಟರ್‌ಮೈಂಡ್" ಆಗಿದ್ದು, ಈ ಹಿಂದೆ ಲೋಕಸಭೆ ಚುನಾವಣೆಗೆ ಸ್ಪರ್ಧಿಸಿದ್ದ ಅಭ್ಯರ್ಥಿಗೆ ರಾಜ್ಯ ಸರ್ಕಾರದ ಸಂಸ್ಥೆಯಿಂದ ಬೇರೆಡೆಗೆ ವರ್ಗಾಯಿಸಲಾದ ಹಣವನ್ನು ಬಳಸಲಾಗಿದೆ ಎಂದು ಜಾರಿ ನಿರ್ದೇಶನಾಲಯ(ಇಡಿ) ಬುಧವಾರ ಹೇಳಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಕೆಲವು ದಿನಗಳ ಹಿಂದೆ ಕೇಂದ್ರ ತನಿಖಾ ಸಂಸ್ಥೆಯೂ ಪ್ರಾಸಿಕ್ಯೂಷನ್ ದೂರು ಅಥವಾ ಚಾರ್ಜ್ ಶೀಟ್ ಅನ್ನು ಬೆಂಗಳೂರಿನ ವಿಶೇಷ ಪ್ರಿವೆನ್ಷನ್ ಆಫ್ ಮನಿ ಲಾಂಡರಿಂಗ್ ಆಕ್ಟ್(ಪಿಎಂಎಲ್ಎ) ನ್ಯಾಯಾಲಯಕ್ಕೆ ಸಲ್ಲಿಸಿರುವುದಾಗಿ ತಿಳಿಸಿದೆ.

ನ್ಯಾಯಾಲಯವು ಚಾರ್ಜ್ ಶೀಟ್ ಅನ್ನು ಪರಿಗಣನೆಗೆ ತೆಗೆದುಕೊಂಡಿದೆ ಎಂದು ಇಡಿ ಹೇಳಿದೆ.

ಮಾಜಿ ಸಚಿವ ಬಿ ನಾಗೇಂದ್ರ ವಾಲ್ಮೀಕಿ ಹಗರಣ: ಇಡಿ ಚಾರ್ಜ್ ಶೀಟ್ ನಲ್ಲಿ ಮಾಜಿ ಸಚಿವ ಬಿ. ನಾಗೇಂದ್ರ ಕಿಂಗ್‌ಪಿನ್ "ಸತ್ಯನಾರಾಯಣ ವರ್ಮ, ಏಟಕಾರಿ ಸತ್ಯನಾರಾಯಣ, ಜೆ.ಜಿ.ಪದ್ಮನಾಭ, ನಾಗೇಶ್ವರ್ ರಾವ್, ನೆಕ್ಕಂಟಿ ನಾಗರಾಜ್ ಮತ್ತು ವಿಜಯ್ ಕುಮಾರ್ ಗೌಡ" ಅವರಂತಹ ಪ್ರಮುಖ ಸಹಚರರು ಸೇರಿದಂತೆ 24 ಮಂದಿಯ ಸಹಾಯದಿಂದ ಈ ಹಗರಣ ನಡೆದಿದ್ದು, ಮಾಜಿ ಸಚಿವ ಬಿ.ನಾಗೇಂದ್ರ ಅವರನ್ನು ಪ್ರಾಥಮಿಕ ಆರೋಪಿ



ಮತ್ತು ಮಾಸ್ಟರ್ ಮೈಂಡ್ ಎಂದು ಹೆಸರಿಸಿರುವುದಾಗಿ ಜಾರಿ ನಿರ್ದೇಶನಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

"ಬಿ ನಾಗೇಂದ್ರ ಅವರ ಪ್ರಭಾವದಿಂದ ನಿಗಮದ(ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ) ಖಾತೆಯನ್ನು ಯಾವುದೇ ಸರಿಯಾದ ಅನುಮತಿಯಿಲ್ಲದೆ ಎಂಜಿ ರಸ್ತೆಯ ಶಾಖೆಗೆ ವರ್ಗಾಯಿಸಲಾಗಿದೆ ಎಂಬುದು ತನಿಖೆಯಲ್ಲಿ ಕಂಡುಬಂದಿದೆ. ಹಣದ ಅಕ್ರಮ ವರ್ಗಾವಣೆಯಲ್ಲಿ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ಅಧಿಕಾರಿಗಳು ಸಹ ಭಾಗಿಯಾಗಿದ್ದಾರೆ ಎಂದು ಆರೋಪಿಸಿದೆ.

ವಾಲ್‌ಮೀಕಿ ನಿಗಮದ ಹಗರಣದಲ್ಲಿಇಡಿ ಅಧಿಕಾರಿಗಳು ಜುಲೈ 11ರಂದು ನಾಗೇಂದ್ರರನ್ನು ಬಂಧಿಸಿದ್ದರು. ಅಂದಿನಿಂದ ನಾಗೇಂದ್ರ ನ್ಯಾಯಾಂಗ ಬಂಧನದಲ್ಲಿದ್ದಾರೆ. ಇದೇ ಪ್ರಕರಣದ ತನಿಖೆ ನಡೆಸುತ್ತಿರುವ ಸಿಐಡಿಯ ಎಸ್‌ಐಟಿ ಅಧಿಕಾರಿಗಳು ಆಗಸ್ಟ್‌ನಲ್ಲಿ ಸಲ್ಲಿಸಿದ್ದ ಆರೋಪಪಟ್ಟಿಯಲ್ಲಿ ನಾಗೇಂದ್ರರ ಹೆಸರನ್ನು ಉಲ್ಲೆಖಿಸದೆ ಕೇವಲ ಅಧಿಕಾರಿಗಳ ಪಾತ್ರದ ಕುರಿತ ವಿವರ ದಾಖಲಿಸಿದ್ದರು. ಆದರೆ, ಇಡಿ ಅಧಿಕಾರಿಗಳು ಎಸ್‌ಐಟಿ ತನಿಖೆಗೆ ವಿರುದ್ಧವಾಗಿ ನಾಗೇಂದ್ರ ಅವರೇ ಹಗರಣದ ಮಾಸ್ಟರ್ ಮೈಂಡ್ ಎಂದು ಚಾರ್ಜ್ ಶೀಟ್ ನಲ್ಲಿ ಉಲ್ಲೇಖಿಸಿದೆ.

2024ರ ಲೋಕಸಭೆ ಚುನಾವಣೆಗೆ ಬಳ್ಳಾರಿ ಕ್ಷೇತ್ರದಿಂದ ಸ್ಪರ್ಧಿಸುವ ಅಭ್ಯರ್ಥಿಯನ್ನು ಬೆಂಬಲಿಸಲು ಹಾಗೂ ಬಿ ನಾಗೇಂದ್ರ ಅವರ ವೈಯಕ್ತಿಕ ವೆಚ್ಚಕ್ಕಾಗಿ 20.19 ಕೋಟಿ ರೂ.ಗಳನ್ನು ಬಳಸಲಾಗಿದೆ ಎಂದು ಇಡಿ ಹೇಳಿದೆ.

ನಾಗೇಂದ್ರ ಅವರ ಸೂಚನೆಯಂತೆಯೇ ಸಂಪೂರ್ಣವಾಗಿ ಹಣಕಾಸು ವಹಿವಾಟು ನಡೆದಿದೆ. ತಾನು ನಡೆಸಿದ ಶೋಧ ಕಾರ್ಯಾಚರಣೆಯಲ್ಲಿ ಈ ವೆಚ್ಚಗಳ "ಸಾಕ್ಷ್ಯ" ಪತ್ತೆಯಾಗಿದೆ ಮತ್ತು ಆರ್ಥಿಕ ವಿಶ್ಲೇಷಣೆ ಮತ್ತು ಹೇಳಿಕೆಗಳಿಂದ ಇದನ್ನು "ದೃಢೀಕರಿಸಲಾಗಿದೆ" ಎಂದು ಇಡಿ ತಿಳಿಸಿದೆ.

## ಅ.12 ರಂದು ವಿವಿಧ ಮೂರ್ತಿಗಳ ಪ್ರತಿಷ್ಠಾಪನೆ

■ ಉದಯರಶ್ಮಿ ದಿನಪತ್ರಿಕೆ

ಬಸವನಬಾಗೇವಾಡಿ: ತಾಲೂಕಿನ ಹತ್ತರಕಿಹಾಳ ಗ್ರಾಮದ ಮಾರುತೇಶ್ವರ ದೇವಸ್ಥಾನ ಆವರಣದಲ್ಲಿ ಅ. 12 ರಂದು ಬೆಳಗ್ಗೆ 10.30 ಗಂಟೆಗೆ ಶ್ರೀರಾಮ, ಲಕ್ಷ್ಮಣ, ಸೀತಾ, ಹನುಮ ಮತ್ತು ವಶಿಷ್ಠ, ವಾಲ್ಮೀಕಿ ಮಹರ್ಷಿ ದೇವರುಗಳ ನೂತನ ಮೂರ್ತಿಗಳ ಪ್ರತಿಷ್ಠಾಪನೆ ಹಾಗೂ ನಾಡದೇವಿಯ ಆರಾಧನೆಯಂಗವಾಗಿ ಧರ್ಮ ಸಭೆ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಸಾನಿಧ್ಯವನ್ನು ಮಸಬಿನಾಳದ ಸಿದ್ಧರಾಮ ಸ್ವಾಮೀಜಿ, ಮನಗೂಳಿಯ ಅಭಿನವಸಂಗನಬಸವಸ್ವಾಮೀಜಿ, ಬಸವನಬಾಗೇವಾಡಿಯ ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ, ಪ್ರವಚನಕಾರ ಕಲಬುರ್ಗಿಯ ಶಂಕ್ರೆಮ್ಮ ತಾಯಿಯವರು ವಹಿಸುವರು. ಅಧ್ಯಕ್ಷತೆಯನ್ನು ವಿಧಾನ ಪರಿಷತ್ ಸದಸ್ಯ ಸುನೀಲಗೌಡ ಪಾಟೀಲ ವಹಿಸುವರು. ಸಚಿವ ಶಿವಾನಂದ ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು. ಅತಿಥಿಗಳಾಗಿ ಜೆಡಿಎಸ್ ರಾಜ್ಯ ಉಪಾಧ್ಯಕ್ಷ ಸೋಮನಗೌಡ ಪಾಟೀಲ ಮನಗೂಳಿ, ಜಿಲ್ಲಾ ಪಂಚಾಯತ ಮಾಜಿ ಸದಸ್ಯ ಕಲ್ಲು ದೇಸಾಯಿ ಆಗಮಿಸುವರು.

ಗ್ರಾಮದ ಪ್ರಮುಖ ಬೀದಿಗಳಲ್ಲಿ ಶ್ರೀರಾಮ, ಲಕ್ಷ್ಮಣ, ಸೀತಾ ಹನುಮ, ವಶಿಷ್ಠ, ವಾಲ್ಮೀಕಿ ಮಹರ್ಷಿ ದೇವರುಗಳ ನೂತನ ಮೂರ್ತಿಗಳ ಮೆರವಣಿಗೆ ಕಾರ್ಯಕ್ರಮಕ್ಕೂ ಮುನ್ನ ಪೂರ್ಣಕುಂಭ ಮೇಳದೊಂದಿಗೆ ನಡೆಯಲಿದೆ ಎಂದು ಗ್ರಾಮದ ಈರಣ್ಣ ಕಲ್ಯಾಣಿ ತಿಳಿಸಿದ್ದಾರೆ.

## ಸಿಂದಗಿ ಪುರಸಭೆ ಮುಖ್ಯಾಧಿಕಾರಿ ಅಮಾನತಿಗೆ ಸಚಿವ ಜಮೀರ್‌ಅಹ್ಮದ್ ಸೂಚನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ದಿನಾಂಕ 08-09-2024ರಂದು ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವ ಬಿ.ಜೆಡ್.ಜಮೀರ್‌ಅಹ್ಮದ ಖಾನ್ ಅವರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಗೈರಾಗಿರುವ ಸಿಂದಗಿಯ ಪುರಸಭೆಯ ಮುಖ್ಯಾಧಿಕಾರಿ ಸುರೇಶ ನಾಯಕ ಅಮಾನತಿಗೆ ಸೂಚಿಸಿದ್ದರು.

ವಾರ್ತಾ ಮತ್ತು ಸಾರ್ವಜನಿಕ ಇಲಾಖೆಯ ನಜರಚೂಕಿನಿಂದ/ಕಣ್ತಪ್ಪಿನಿಂದ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಅಮಾನತಿಗೆ ಸೂಚಿಸಿದ್ದಾರೆ ಎಂದು ಸುದ್ದಿ ಬಿಡುಗಡೆಯಾಗಿತ್ತು. ಇದನ್ನು ಪುರಸಭೆಯ ಮುಖ್ಯಾಧಿಕಾರಿ ಸುರೇಶ ನಾಯಕ ಅವರನ್ನು ಅಮಾನತಿಗೆ ಸೂಚನೆ ನೀಡಿದ್ದಾರೆ ಎಂದು ತಿದ್ದುಪಡಿಯಾಗಿ ಮರು ಪ್ರಕಟಣೆ ಬಿಡುಗಡೆ ಮಾಡಲಾಗಿದೆ.

## ಹಬ್ಬಗಳ ಪಾವಿತ್ರ್ಯತೆ ಕಾಪಾಡಿಕೊಳ್ಳಿ :ಶಾಸಕ ಯತ್ನಾಳ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಮುಂಬರುವ ಹಿಂದೂಗಳ ಪವಿತ್ರ ವಿಜಯ ದಶಮಿ, ದೀಪಾವಳಿ ಮತ್ತಿತರೆ ಹಬ್ಬಗಳ ಪಾವಿತ್ರ್ಯತೆಯನ್ನು ಕಾಪಾಡುವ ಮಹತ್ತರ ಉದ್ದೇಶದಿಂದ ಹಿಂದೂ ದೇವರನ್ನು ಆರಾಧಿಸುವ ಹಿಂದೂಗಳ ಹತ್ತಿರವೇ ಹೂ, ಹಣ್ಣು, ಕಾಯಿ, ಕರ್ಪೂರ,ಕುಂಕುಮ ಮತ್ತಿತರೆ ಪೂಜಾ ಸಾಮಾಗ್ರಿಗಳನ್ನು ಖರೀದಿಸಬೇಕು ಎಂದು ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ಕರೆ ನೀಡಿದ್ದಾರೆ.

ಈ ಕುರಿತಂತೆ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಹಿಂದೂ ವ್ಯಾಪಾರಿಗಳು ಕೂಡ ಹಿಂದೂಗಳ ಪ್ರತಿಯೊಂದು ಹಬ್ಬಗಳನ್ನು ಮಡಿವಂತಿಕೆ, ಭಕ್ತಿಯಿಂದ ಪೂಜೆ ಸಲ್ಲಿಸಿ, ನಮ್ಮ ದೇವರುಗಳನ್ನು ಆರಾಧಿಸುತ್ತಾರೆ. ಈ ರೀತಿ ಹಣೆಗೆ ಕುಂಕುಮ ಹಚ್ಚಿಕೊಂಡು ವ್ಯಾಪಾರ ಮಾಡುವ ಹಿಂದೂಗಳ ಹತ್ತಿರವೇ ಪೂಜಾ ಸಾಮಾಗ್ರಿಗಳನ್ನು ಖರೀದಿಸುವುದರಿಂದ, ನಮ್ಮ ಹಬ್ಬಗಳ ಪಾವಿತ್ರ್ಯತೆ ಕಾಪಾಡಿಕೊಂಡು, ಮಡಿವಂತಿಕೆಯಿಂದ, ಧರ್ಮಾನುಸಾರವಾಗಿ ನಡೆದುಕೊಳ್ಳುವ ಜೊತೆಗೆ ಭಗವಂತನ ಕೃಪೆಗೆ ಪಾತ್ರರಾಗಲು ನೆರವಾಗುತ್ತದೆ.

ಪವಿತ್ರ ಹಿಂದೂ ಧರ್ಮದ ಬಗ್ಗೆ ಗೌರವವಿಲ್ಲದ, ಹಿಂದೂ ದೇವರನ್ನು ನಂಬದ, ಹಿಂದೂಗಳನ್ನು ವಿರೋಧಿಸುವವರು ಅಲ್ಲಿಯೇ ತಮ್ಮ ಬುತ್ತಿಯಲ್ಲಿ ಮಾಂಸಾಹಾರ ತಂದು ತಿಂದು ಅಥವಾ ಮನೆಯಲ್ಲಿ ಮಾಂಸಾಹಾರ ತಿಂದು ಬಂದು, ಅಶುದ್ಧತೆಯಿಂದ ವ್ಯಾಪಾರ ಮಾಡುವವರ ಹತ್ತಿರ ಯಾವುದೇ ಕಾರಣಕ್ಕೂ ಪೂಜಾ ಸಾಮಾಗ್ರಿಗಳನ್ನು ತೆಗೆದುಕೊಳ್ಳಬಾರದು. ಅಂತವರ ಹತ್ತಿರ ಖರೀದಿಸಿದ ವಸ್ತುಗಳಿಂದ, ನಾವು ಪೂಜಿಸುವ ಭಗವಂತನ ಪೂಜೆಯು ಅಪವಿತ್ರತೆಯಿಂದ ಕೂಡಿ, ನಾವು ಭಗವಂತನ ಕೃಪೆಗೆ ಪಾತ್ರರಾಗುವುದಿಲ್ಲ.

ಹಿಂದೂಗಳು ಧಾರ್ಮಿಕ ಮತ್ತು ಸಾಮಾಜಿಕ ಆಚರಣೆಗಳಲ್ಲಿ ಬಳಸುವ ಮತ್ತು ನಮ್ಮ ಧರ್ಮದಲ್ಲಿ ಅತ್ಯಂತ ಶ್ರೇಷ್ಠ ಮಹತ್ವ ಪಡೆದಿರುವ ಕುಂಕುಮವನ್ನು ಪ್ರತಿಯೊಬ್ಬ ಹಿಂದೂ ವ್ಯಾಪಾರಿ ಹಣೆಗೆ ಹಚ್ಚಿಕೊಂಡೇ ವ್ಯಾಪಾರ ಮಾಡಬೇಕು. ಇಂತಹ ಕುಂಕುಮ ಹಚ್ಚಿಕೊಂಡು ವ್ಯಾಪಾರ ಮಾಡುವ ಹಿಂದೂ ಬಾಂಧವರ ಹತ್ತಿರವೇ ನಾವು ನಮ್ಮ ಹಬ್ಬಗಳಿಗೆ ಅವಶ್ಯವಿರುವ ಹೂ, ಹಣ್ಣು, ಹಾರ, ಕಾಯಿ, ಕರ್ಪೂರ ಇತ್ಯಾದಿ ಸಾಮಾಗ್ರಿಗಳನ್ನು ಖರೀದಿಸಬೇಕು. ಇದರಿಂದ ಹಿಂದೂ ಬಡ ವ್ಯಾಪಾರಿಗಳ ವ್ಯಾಪಾರಕ್ಕೆ ಪ್ರೋತ್ಸಾಹ ನೀಡುವುದರ ಜೊತೆಗೆ ಅವರಿಗೆ ಆರ್ಥಿಕವಾಗಿ ಬಲ ಕೊಟ್ಟಂತಾಗುತ್ತದೆ. ಮತ್ತು ನಮ್ಮ ಎಲ್ಲ ಹಬ್ಬಗಳನ್ನು ಪವಿತ್ರತೆಯಿಂದ, ಮಡಿವಂತಿಕೆಯಿಂದ ಆಚರಿಸಿದಂತಾಗುತ್ತದೆ ಎಂದು ವಿನಂತಿಸಿದ್ದಾರೆ.

## ಕನ್ನಡ ಭಾಷೆಯ ಬಗ್ಗೆ ಅಭಿಮಾನವಿರಲಿ: ಡಿಸಿ ಟಿ.ಭೂಬಾಲನ್

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಭಾರತವು ಹಲವು ವೈವಿಧ್ಯಗಳನ್ನು ಒಳಗೊಂಡ ದೇಶವಾಗಿದ್ದು, ಕರ್ನಾಟಕ ತನ್ನದೇಯಾದ ವಿಶಿಷ್ಟತೆ ಹೊಂದಿದ್ದು, ರಾಜ್ಯದ ಜನರ ದೈನಂದಿನ ಜೀವನದ ಕನ್ನಡ ಭಾಷೆಯ ಬಗ್ಗೆ ನಿರಂತರವಾಗಿ ಅಭಿಮಾನವಿರಲಿ ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಹೇಳಿದರು.

ಬುಧವಾರ ಅವರು ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದ ಆವರಣದಲ್ಲಿ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಕನ್ನಡ ಜ್ಯೋತಿ ರಥ-'ವನ್ನು ಸ್ವಾಗತಿಸಿ, ಭುವನೇಶ್ವರಿ ದೇವಿಗೆ ಮಾಲಾರ್ಪಣೆ ಮಾಡಿ ಮಾತನಾಡಿದರು.

87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳದ ಅಂಗವಾಗಿ ಕನ್ನಡ ಜ್ಯೋತಿ ರಥ ರಾಜ್ಯಾದ್ಯಂತ ಸಂಚರಿಸುತ್ತಿದ್ದು, ವಿಜಯಪುರ ಜಿಲ್ಲೆಯಲ್ಲಿ ಎರಡು ದಿನಗಳ ಕಾಲ ಸಂಚರಿಸಲಿದೆ. ಕನ್ನಡ ಜ್ಯೋತಿ ರಥಕ್ಕೆ ಸಾರ್ವಜನಿಕರು ಅಭೂತಪೂರ್ವ ಸ್ವಾಗತ ಕೋರಿ ಕನ್ನಡ ಸಾಹಿತ್ಯ ಸಮೇಳನದ ಯಶಸ್ಸಿಗೆ ಸಹಕರಿಸಬೇಕು. ಪ್ರತಿಯೊಬ್ಬರೂ ಒಂದು ದಿನಕ್ಕೆ ಸೀಮಿತವಾಗದೇ ಪ್ರತಿ ದಿನವೂ ಕನ್ನಡ ಭಾಷೆಯ ಬಗ್ಗೆ ಅಭಿಮಾನ ಬೆಳಸಿಕೊಳ್ಳಬೇಕು. ನಾಡುನುಡಿಯ ಬಗ್ಗೆ ನಿರಂತರವಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಹೇಳಿದರು.

ಕನ್ನಡ ಜ್ಯೋತಿ ರಥಯಾತ್ರೆಯೂ ಸಿದ್ದೇಶ್ವರ ದೇವಸ್ಥಾನದಿಂದ ನಗರದ ಮಾರುಕಟ್ಟೆ ರಸ್ತೆ ಮಾರ್ಗವಾಗಿ ಗಾಂಧಿವೃತ್ತದ ಮೂಲಕ ವಿವಿಧ ಕಲಾಮೇಳಗಳೊಂದಿಗೆ ನಗರದಲ್ಲಿ ಮೆರವಣಿಗೆ ನಡೆಸಲಾಯಿತು. ನಂತರ ರಥವನ್ನು ಇಂಡಿ ತಾಲೂಕಿಗೆ ಬಿಳ್ಕೊಡಲಾಯಿತು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ, ವಿಜಯಪುರ ಉಪವಿಭಾಗಾಧಿಕಾರಿ, ಗುರುನಾಥ ದಡ್ಡಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಎನ್. ಎಚ್.ನಾಗೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಂತೋಷ ಭೋವಿ, ತಹಶೀಲ್ದಾರ ಪ್ರಕಾಶ ಚನಗೊಂಡ, ವಿಜಯಪುರ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಹಾಶಿಂಪೀರ್ ವಾಲೀಕಾರ, ಫಯಾಜ್ ಕಲಾದಗಿ, ಅಡಿವೆಪ್ಪ ಸಾಲಗಲ್, ಅಭಿಷೇಕ್ ಚಕ್ರವರ್ತಿ, ಆನಂದ ಕುಲಕಣಿ, ಸುರೇಶ ಜತ್ತಿ, ದೇವೆಂದ್ರ ಮೆರೆಕರ್, ವಿದ್ಯಾವತಿ ಅಂಕಲಗಿ, ರವಿ ಕಿತ್ತೂರ, ಶ್ರೀಶೈಲ ಆಳೂರ ಸೇರಿದಂತೆ ವಿವಿಧ ಅಧಿಕಾರಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

" ಸಾಹಿತ್ಯ, ಕಲೆ, ಸಾಂಸ್ಕೃತಿಕ ಪರಂಪರೆಗಳನ್ನು ನಾವು ಅನುಸರಣೆ ಮಾಡಬೇಕು. ಇಂದಿನ ಯುವ ಜನಾಂಗಕ್ಕೆ ಕನ್ನಡ ನಾಡು ನುಡಿಯ ಬಗ್ಗೆ ಹಿರಿಯರ ತ್ಯಾಗ ಹಾಗೂ ಸಾಧನೆಗಳನ್ನು ಪರಿಚಯಿಸುವ ಕಾರ್ಯ ಮಾಡಬೇಕಾಗಿದೆ."

■ ರಿಷಿ ಆನಂದ
ಜಿಪಂ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ

### 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಕನ್ನಡ ಜ್ಯೋತಿ ರಥಕ್ಕೆ ಅದ್ಧೂರಿ ಸ್ವಾಗತ

# ಸಿಂದಗಿಯಲ್ಲಿ ಕನ್ನಡ ಜ್ಯೋತಿ ರಥಕ್ಕೆ ಅದ್ಧೂರಿ ಸ್ವಾಗತ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಕನ್ನಡ ನಾಡು-ನುಡಿ, ನೆಲ, ಜಲ, ಸಾಹಿತ್ಯ, ಸಂಸ್ಕೃತಿಯನ್ನು ಬಿಂಬಿಸುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಪ್ರತಿ ವರ್ಷ ಅದ್ದೂರಿ ಹಾಗೂ ಅರ್ಥಪೂರ್ಣವಾಗಿ ನಡೆಯುತ್ತಿರುವುದು ನಮ್ಮೆಲ್ಲರಿಗೆ ಹೆಮ್ಮೆ. ಕನ್ನಡ ಸಾಹಿತ್ಯದ ಮಹತ್ವವನ್ನು ಸಾರುವ ಈ ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಲಿ ಎಂದು ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಮಹಾಂತೇಶ ಯಡ್ರಾಮಿ ಹೇಳಿದರು.

ನಗರದ ಕನ್ನಡಾಂಬೆ ವೃತ್ತದಲ್ಲಿ ಮಂಡ್ಯದಲ್ಲಿ ನಡೆಯುವ 87ನೆಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಜ್ಯೋತಿ ರಥವನ್ನ ತಾಲೂಕು ಆಡಳಿತ ಮತ್ತು ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಘಟಕದ ವತಿಯಿಂದ ಭವ್ಯವಾಗಿ ಬರಮಾಡಿಕೊಂಡು ಮಾತನಾಡಿದ ಅವರು, ಕನ್ನಡ ಕೇವಲ ಭಾಷೆಯಲ್ಲ. ತನ್ನದೇ ಆದ ನೆಲ, ಜಲ, ಸಂಸ್ಕೃತಿಯ ಹಿರಿಮೆಯನ್ನು ಒಳಗೊಂಡಿದೆ. ಮಂಡ್ಯದಲ್ಲಿ ನಡೆಯುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಲಿ ಎಂದು ಶುಭಹಾರೈಸಿದರು.

ಇದೇ ಸಂದರ್ಭದಲ್ಲಿ ಅಶೋಕ ಅಲ್ಲಾಪುರ, ಶೋಭಾ ಚಿಗರಿ ಮಾತನಾಡಿ, ಡಿ.20 ರಿಂದ 22ರವರೆಗೆ ನಡೆಯುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಕನ್ನಡ ಜ್ಯೋತಿ ರಥವು 87 ದಿನಗಳ ಕಾಲ ರಾಜ್ಯದ 240 ತಾಲ್ಲೂಕುಗಳಲ್ಲಿ ಸಂಚರಿಸಲಿದೆ. ಈ ರಥ-'ಯಾತ್ರೆಯ ಮೂಲಕ ಕನ್ನಡ ನಾಡು, ನುಡಿ, ಜಲ, ಸಂಸ್ಕೃತಿಯನ್ನು ಎಲ್ಲೆಡೆ ಪಸರಿಸುವ ಮತ್ತು ಜಾಗೃತಿ ಮೂಡಿಸುವ ಉದ್ದೇಶ ಹೊಂದಿದೆ ಎಂದರು.

ಕನ್ನಡ ರಥವನ್ನು ಪಟ್ಟಣದ ಕನ್ನಡಾಂಬೆಯ ವೃತ್ತದಲ್ಲಿ ಪುಷ್ಪಾರ್ಚನೆ, ಆರತಿ ಮಾಡಿ ಬರಮಾಡಿಕೊಂಡು ಬಸವೇಶ್ವರ ವೃತ್ತ, ಸ್ವಾಮಿ ವಿವೇಕಾನಂದ ವೃತ್ತದ ಮಾರ್ಗವಾಗಿ ಸಕಲ ಬೀದಿಗಳಲ್ಲಿ ಡೊಳ್ಳು ವಾದ್ಯಗಳೊಂದಿಗೆ ಮೆರವಣಿಗೆ ಮಾಡಿ ಸಂಚರಿಸಿ ಕನಕದಾಸ ವೃತ್ತಕ್ಕೆ ಬಂದು ತಲುಪಿತು. ಅಲ್ಲಿಂದ ಮುಂದಿನ ಯಡ್ರಾಮಿ ತಾಲೂಕಿಗೆ ಮಾಜಿ ಶಾಸಕ ರಮೇಶ ಭೂಸನೂರ ಬೀಳ್ಕೊಟ್ಟರು.

### ಕತ್ತಲ್ಲಲ್ಲಿ ಸಾಗಿದ ಕನ್ನಡಮ್ಮನ ರಥ

ದಾರಿ ಉದ್ದಕ್ಕೂ ಕನ್ನಡಮ್ಮನ ರಥವು ಕಗ್ಗತ್ತಲಲ್ಲೇ ಸಾಗಿ ಬಂದಿತು. ಇದರಿಂದ ಸಾರ್ವಜನಿಕರು ಕನ್ನಡಮ್ಮ ಮೆರವಣಿಗೆ ಕತ್ತಲಲ್ಲಿ ಮಾಡುತ್ತಿರುವುದು ಬೇಸರದ ಸಂಗತಿ ಎಂದು ಸಾರ್ವಜನಿಕ ಆಕ್ರೋಶ ವ್ಯಕ್ತಪಡಿಸಿದರು. ಹೆಸ್ಕಾಂ ಇಲಾಖೆಗೆ ಸಂಪರ್ಕಿಸಿದರೂ ನಿರ್ಲಕ್ಷ್ಯ ತೋರಿದ ಅಧಿಕಾರಿಗಳು.

### ಅಧಿಕಾರಿಗಳು ಗೈರು

ಕನ್ನಡ ನಾಡು, ನುಡಿ, ಜಲ, ಕನ್ನಡದ ಕಂಪನವನ್ನು ಸುಸುವ ಮಂಡ್ಯದಲ್ಲಿ ನಡೆಯುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ರಥವು ಸಿಂದಗಿ ನಗರಕ್ಕೆ ಆಗಮಿಸಿದಾಗ ತಹಶೀಲ್ದಾರ್ ಕಾರ್ಯಾಲಯದ ಸಿಬ್ಬಂದಿಗಳು, ಸಿಡಿಪಿಒ ಇಲಾಖೆ, ಪೊಲೀಸ್ ಇಲಾಖೆ, ಪುರಸಭೆ ಇಲಾಖೆ ಹೊರತುಪಡಿಸಿ ಮುಂಚೂಣಿಯಲ್ಲಿರಬೇಕಾದ ತಾಲೂಕಿನ ಬಹುತೇಕ ಅಧಿಕಾರಿಗಳು ಗೈರಾಗಿದ್ದು ಎದ್ದು ಕಾಣುತಿತ್ತು.

ಇದೇ ಸಂದರ್ಭದಲ್ಲಿ ಊರಿನ ಹಿರಿಯಮಠದ ಶಿವಾನಂದ ಶಿವಾಚಾರ್ಯರು ಆಶೀರ್ವಚನ ನೀಡಿದರು. ಕಸಾಪ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲಿಕಾರ್, ತಾಲೂಕಾಧ್ಯಕ್ಷ ಶಿವಾನಂದ ಬಡಾನೂರ, ಉಪತಹಶೀಲ್ದಾರ್ ಇಂದ್ರಾಬಾಯಿ ಬಳಗಾನೂರ, ಕಂದಾಯ ನಿರೀಕ್ಷಕ ಆಯ್.ಎ.ಮಕಾಂದಾರ, ನಿಖಿಲ ಖಾನಾಪುರ, ಚಂದ್ರಶೇಖರ ದೇವರೆಡ್ಡಿ, ಎಂ.ಎಂ.ಹಂಗರಗಿ, ಸಂತೋಷ ಪಾಟೀಲ ಡಂಬಳ, ಆನಂದ ಶಾಬಾದಿ, ಪಂಡಿತ ಯಂಪುರೆ, ಸುನಂದಾ ಯಂಪುರೆ, ಸೈನಾಬಿ ಮಸಳಿ, ಜಯಶ್ರೀ ಹದನೂರ, ಶರಣಬಸವ ಲಂಗೋಟಿ, ಎ.ಕೆ.ಬಿರಾದಾರ, ಸಿದ್ದು ಬುಳ್ಳಾ, ರಮೇಶ ಯಾಳಗಿ, ಸಂಗನಗೌಡ ಪಾಟೀಲ ಅಗಸಬಾಳ, ಎಂ.ಎಂ.ಚಟ್ಟರಕಿ, ಸಿಡಿಪಿಒ ಶಂಭುಲಿಂಗ ಹಿರೇಮಠ, ಶಿವಾನಂದ ಕಲಬುರಗಿ, ಎಸ್.ಬಿ.ಖಾನಾಪುರ, ಸಂತೋಷ ಮನಗೂಳಿ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಕನ್ನಡದ ಮನಸ್ಸುಗಳು ಈ ಭವ್ಯ ಮೆರವಣಿಗೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಿದರು.

# ಸಿಯುಕೆಯಲ್ಲಿ ವಿದ್ಯಾರ್ಥಿಗಳ ನಿಯತಕಾಲಿಕೆ ಇಮ್ಯಾಜಿಕಾ ಬಿಡುಗಡೆ



ಕಲಬುರಗಿ: "ನಿಯತಕಾಲಿಕೆಯು ವಿದ್ಯಾರ್ಥಿಗಳು ತಮ್ಮ ಅಭಿವ್ಯಕ್ತಿಯನ್ನು ಕಂಡುಕೊಳ್ಳಲು ಮತ್ತು ನಿಪುಣ ಸಾಹಿತಿಗಳಾಗಲು ಸಹಾಯ ಮಾಡುತ್ತದೆ" ಎಂದು ಸಿಯುಕೆಯ ಕುಲಪತಿ ಪ್ರೊ.ಬಟ್ಟು ಸತ್ಯನಾರಾಯಣ ಹೇಳಿದರು. ಸಿಯುಕೆಯಲ್ಲಿ ಇಂಗ್ಲಿಷ್ ವಿಭಾಗವು ಹೊರತಂದಿರುವ ವಿದ್ಯಾರ್ಥಿಗಳ ಅರ್ಧವಾರ್ಷಿಕ ನಿಯತಕಾಲಿಕೆ ಇಮ್ಯಾಜಿಕಾ ಬಿಡುಗಡೆ ಸಮಾರಂಭದಲ್ಲಿ ಅವರು ಮಾತನಾಡಿದರು. ಆಂಗ್ಲ ವಿಭಾಗ ಮತ್ತು ವಿದ್ಯಾರ್ಥಿಗಳ ಕಾರ್ಯಕ್ಕೆ ಅಭಿನಂದನೆ ಸಲ್ಲಿಸಿದರು. ಅವರು ಮುಂದುವರೆದು ಮಾತನಾಡಿ "ಭವಿಷ್ಯದ ಬರಹಗಾರರನ್ನು ಸೃಷ್ಟಿಸಲು ಹಾಗು ಅವರಿಗೆ ತರಬೇತಿ ನೀಡವಲ್ಲಿ ಇಂತಹ ನಿಯತಕಾಲಿಕೆಗಳು ಸಹಕಾರಿಯಾಗಲಿವೆ. ನಿಮ್ಮ ಕಲ್ಪನೆಯನ್ನು ಸೃಜನಶೀಲ ಬರವಣಿಗೆಗೆ ಸೀಮಿತಗೊಳಿಸಬೇಡಿ, ನಿಮ್ಮ ಸುತ್ತಲಿನ ಸಮಾಜವನ್ನು ನೋಡಿ ಮತ್ತು ಸಮಾಜದ ಸಮಸ್ಯೆಗಳಿಗೆ ಪ್ರತಿಕ್ರಿಯಿಸಿ. ಬರಹಗಾರರು ಸಮಾಜದ ವಕ್ತಾರರು ಇದ್ದಂತೆ. ನೀವು ಜ್ವಲಂತ ಸಮಸ್ಯೆಗಳನ್ನು ಮುಖ್ಯವಾಹಿನಿಗೆ ತಂದರೆ, ಅದನ್ನು ಗಮನಿಸಲಾಗುತ್ತದೆ ಮತ್ತು ಪರಿಹರಿಸಲಾಗುತ್ತದೆ" ಎಂದು ಹೇಳಿದರು. ಇಂಗ್ಲಿಷ್ ವಿಭಾಗದ ಮುಖ್ಯಸ್ಥ ಮತ್ತು ಪತ್ರಿಕೆಯ ಮುಖ್ಯ ಸಂಪಾದಕ ಪ್ರೊ.ಬಸವರಾಜ ಪಿ ಡೋಣೂರ್ ಮಾತನಾಡಿ, "ಇಮಾಜಿಕಾದ ಮೊದಲ ಸಂಚಿಕೆಯು ಅಸಂಬದ್ಧತೆಯ ವಿಷಯವನ್ನು ಹೊಂದಿದೆ, ಇದು ಪ್ರಪಂಚದ ಸ್ಪಷ್ಟವಾದ ಉದಾಸೀನತೆಯ ವಿರುದ್ಧ ಅಸ್ತಿತ್ವದ ಸಂಕೀರ್ಣತೆಗಳಲ್ಲಿ ದಂಗೆಯ ಭಾವವನ್ನು ಸೆರೆಹಿಡಿಯುತ್ತದೆ" ಎಂದು ಹೇಳಿದರು. ನಿಯತಕಾಲಿಕೆಯ ಸಂಪಾದಕ ಡಾ. ಆಶಿಶ್ ಬೆಳಮ್ಕರ್ ಅವರು ಮಾತನಾಡಿ "ಇಮಾಜಿಕಾ ಶೀರ್ಷಿಕೆಯು ಸ್ವಯಂ ('ನಾನು'), ರಚಿಸಲು (ಸಂಸ್ಕೃತದಲ್ಲಿ 'ಮಾ') ಮತ್ತು ಯಾವುದೇ ರೀತಿಯ ಕಲೆಯ ರಚನೆಯ ಅವಿಭಾಜ್ಯ ಅಂಶಗಳಾದ ಕಲ್ಪನೆಯ ಅಂಶಗಳನ್ನು ಹೊಂದಿದೆ. ಈ ಸಂಚಿಕೆಯಲ್ಲಿ ಎಲ್ಲಾ ಲೇಖನಗಳನ್ನು ವಿದ್ಯಾರ್ಥಿಗಳು ಬರೆದಿದ್ದಾರೆ" ಎಂದು ಹೇಳಿದರು. ಈ ಸಂದರ್ಭದಲ್ಲಿ ಡಾ.ರೇಣುಕಾ ನಾಯ್ಕ, ಡಾ.ಮಹೇಂದ್ರ, ಡಾ.ಪ್ರಕಾಶ ಬಾಳಿಕಾಯಿ, ಡಾ.ಮಹಿಮಾ ರಾಜ್ ಸೇರಿದಂತೆ ವಿಭಾಗದ ಅಧ್ಯಾಪಕರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಗ್ರಾಮೀಣ ಭಾಗದಲ್ಲಿ ನೀರಿನ ಸುರಕ್ಷಿತ ಭವಿಷ್ಯಕ್ಕಾಗಿ ಶೃಂಗಸಭೆ: ಪ್ರಿಯಾಂಕ್ ಖರ್ಗೆ

ಕಲಬುರಗಿ: ಕರ್ನಾಟಕದ ಗ್ರಾಮೀಣ ಭಾಗ ಎದುರಿಸುತ್ತಿರುವ ಕುಡಿಯವ ನೀರು ಹಾಗೂ ನೈರ್ಮಲ್ಯದ ಸಮಸ್ಯೆಗೆ ಪರಿಹಾರ ಒದಗಿಸುವ ವಿನೂತನ ಆಲೋಚನೆಗಳಿಗೆ ವೇದಿಕೆಯಾಗಲಿರುವ ಗ್ರಾಮೀಣ ನೀರು ಮತ್ತು ನೈರ್ಮಲ್ಯ ಸುಸ್ಥಿರತೆಯ ಶೃಂಗಸಭೆಯನ್ನು ಮಾಹಿತಿ ತಂತ್ರಜ್ಞಾನ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿ ರಾಜ್ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಅಕ್ಟೋಬರ್ 29ರಂದು ಬೆಂಗಳೂರಿನಲ್ಲಿ ಏರ್ಪಡಿಸಲಾಗಿದೆ ಎಂದು ಮಾಹಿತಿ ತಂತ್ರಜ್ಞಾನ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಅವರು ತಿಳಿಸಿದ್ದಾರೆ.

ಗ್ರಾಮೀಣ ಭಾಗದಲ್ಲಿ ನೀರಿನ ನೈರ್ಮಲ್ಯತೆಯ ಭವಿಷ್ಯ ನಿರ್ಮಾಣಕ್ಕೆ ನಾವಿನ್ಯತೆ ಬಳಕೆ' ಶೀರ್ಷಿಕೆಯಡಿ ಈ ಶೃಂಗಸಭೆಯನ್ನು ಆಯೋಜಿಸಲಾಗುತ್ತಿದೆ. ಶೃಗಸಭೆಯ ಬಗ್ಗೆ ಹಂಚಿಕೊಂಡಿರುವ ಸಚಿವರು 'ಹೊಸ ತಂತ್ರಜ್ಞಾನ ಬಳಸಿಕೊಂಡು ತ್ಯಾಜ್ಯ ನಿರ್ವಹಣೆ, ನೀರಿನ ಮಾಲಿನ್ಯವನ್ನು ಪತ್ತೆಹಚ್ಚುವುದು (ರಾಸಾಯನಿಕ, ಜೈವಿಕ ಇತ್ಯಾದಿ), ಡಿಸಲೀಕರಣ, ಕೈಗಾರಿಕಾ ಅಭಿವೃದ್ಧಿಗೆ ಉದಯೋನ್ಮುಖ ತಂತ್ರಜ್ಞಾನಗಳನ್ನು ಮೌಲ್ಯಮಾಪನ ಮಾಡುವುದು ಸಭೆಯ ಮುಖ್ಯ ಉದ್ದೇಶಗಳಾಗಿವೆ. ಜಲ ಮಾಲಿನ್ಯ, ಜಲಸಂಪನ್ಮೂಲ ನಿರ್ವಹಣೆ, ನೀರಿನ ಗುಣಮಟ್ಟ ನಿರ್ವಹಣೆ, ನೀರಿನ ಶುದ್ಧೀಕರಣ ಘಟಕಗಳು ಮತ್ತು ನೀರಿನ ಉತ್ಪಾದನೆಯ ಕುರಿತು ಪೈಲಟ್ ಆಧಾರದ ಮೇಲೆ ಯೋಜನೆಗಳನ್ನು ಕೈಗೊಳ್ಳಲಾಗುತ್ತದೆ ಎಂದು ಅವರು ಹೇಳಿಕೆಯಲ್ಲಿ ವಿವರಿಸಿದ್ದಾರೆ.



ಈ ನಾವೀನ್ಯತೆ ಯೋಜನೆಗಳಿಗೆ ಧನಸಹಾಯ, ನೈರ್ಮಲ್ಯ ಸೌಲಭ್ಯಗಳನ್ನು ಸುಧಾರಿಸಿ ಮತ್ತು ನೀರಿನ ಬಳಕೆಯನ್ನು ಕಡಿಮೆ ಮಾಡಲು, ತ್ಯಾಜ್ಯವನ್ನು ಸಂಸ್ಕರಿಸಲು ಪರಿಸರ ಸ್ನೇಹಿ ನೈರ್ಮಲ್ಯ ತಂತ್ರಜ್ಞಾನಗಳನ್ನು ಅನ್ವೇಷಿಸಲಾಗುತ್ತದೆ. ಈ ಶೃಂಗಸಭೆಯ ಮೂಲಕ ಸರ್ಕಾರ ತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ಕಾರ್ಯಸಾಧ್ಯವಾದ ಪರಿಹಾರವನ್ನು ಅನ್ವೇಷಿಸಲಿದೆ ಎಂದು ಅವರು ತಿಳಿಸಿದ್ದಾರೆ. ಕರ್ನಾಟಕ ಗ್ರಾಮೀಣ ನೀರು ಮತ್ತು ನೈರ್ಮಲ್ಯ ಶೃಂಗಸಭೆಯು ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಕೊರತೆ ಮತ್ತು ನೈರ್ಮಲ್ಯದ ಸವಾಲುಗಳ ನವೀನ ತಾಂತ್ರಿಕ ಪರಿಹಾರಗಳನ್ನು ಗುರುತಿಸಲು ಮತ್ತು ಉತ್ತೇಜಿಸಲು ಸಮರ್ಪಿಸಲಾಗಿದೆ. ಈ ಶೃಂಗಸಭೆಯಲ್ಲಿ ಪ್ರತಿಷ್ಠಿತ ಉದ್ಯಮದ ಮುಖಂಡರು, ಉದ್ಯಮಿಗಳು ಮತ್ತು ಸಂಶೋಧಕರನ್ನು ಒಗ್ಗೂಡಿಸಿ, ಅವರ ಆಲೋಚನೆ ಹಾಗೂ ಅಭಿಪ್ರಾಯಗಳ ವಿನಿಮಯವನ್ನು ಉತ್ತೇಜಿಸುವುದು ರಾಜ್ಯದ ಧ್ಯೇಯವಾಗಿದೆ ಎಂದು ಅವರು ಹೇಳಿದ್ದಾರೆ.

ಶೃಂಗಸಭೆಯ ಮೂಲಕ, ಅತ್ಯಾಧುನಿಕ ತಂತ್ರಜ್ಞಾನಗಳನ್ನು ಅನ್ವೇಷಿಸಿ, ಹಣಕಾಸು ಮತ್ತು ಪಾಲುದಾರಿಕೆಗಳನ್ನು ಸುಲಭಗೊಳಿಸಿ ಶುದ್ಧ ನೀರು ಮತ್ತು ಪರಿಣಾಮಕಾರಿ ನೈರ್ಮಲ್ಯ ವ್ಯವಸ್ಥೆಗಳಿಗೆ ಸಮರ್ಥನೀಯವಾಗಿ ಬಳಸಿಕೊಳ್ಳಲು ಸಂಪನ್ಮೂಲಗಳನ್ನು ಸಜ್ಜುಗೊಳಿಸುವ ಗುರಿಯನ್ನು ಹೊಂದಿದ್ದೇವೆ. ಈ ಮೂಲಕ ಗ್ರಾಮೀಣ ಸಮುದಾಯಗಳ ಜೀವನದ ಗುಣಮಟ್ಟವನ್ನು ಹೆಚ್ಚಿಸಲು ಸಹಕಾರಿಯಾಗಲಿದೆ ಎಂದರು. ಈ ಸುಸ್ಥಿರ ಅಭಿವೃದ್ಧಿಗೆ ಇದು ಅತ್ಯಗತ್ಯವಾಗಿರುವುದರಿಂದ ರಾಜ್ಯವು ನವೀನ ಪರಿಹಾರಗಳೊಂದಿಗೆ ಗ್ರಾಮೀಣ ಸಮುದಾಯಗಳನ್ನು ಸಬಲೀಕರಣಗೊಳಿಸಲು ಬಯಸುತ್ತದೆ ಎಂದು ಅವರು ತಿಳಿಸಿದ್ದಾರೆ.

ಗ್ರಾಮೀಣ ಭಾಗದ ನೀರು ಮತ್ತು ನೈರ್ಮಲ್ಯಕ್ಕೆ ಸಂಬಂಧಿಸಿದ ಸಮಸ್ಯೆಗಳಿಗೆ ವಿನೂತನ ಆಲೋಚನೆ ಹೊಂದಿರುವವರಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ಎಲ್ಲಾ ಸಮಸ್ಯೆಗಳಿಗೆ ಪರಿಹಾರವಾಗಿ ತಮ್ಮ ಬಳಿ ನವೀನ ಆಲೋಚನೆ ಇರುವ ನವೋದ್ಯಮಗಳು ಇದಕ್ಕೆ ಅರ್ಜಿ ಸಲ್ಲಿಸಬಹುದು. ಶೃಂಗಸಭೆಯಲ್ಲಿ ತಮ್ಮ ಆಲೋಚನೆಗಳನ್ನು ಪ್ರಸ್ತುತ ಪಡಿಸುವ ಸ್ಪರ್ಧಾಳುಗಳಿಗೆ ವಿಶೇಷ ಅಧಿವೇಶನ ನಡೆಸಲಾಗುವುದು, ಅಲ್ಲಿ ಆಯ್ದ ನವೋದ್ಯಮ ವಿಜೇತರು ಕನಿಷ್ಠ 25 ಲಕ್ಷ ರೂ. ಗಳನ್ನು ಬಹುಮಾನ ಪಡೆಯಲಿದ್ದಾರೆ. ಈ ಪ್ರಯತ್ನದಲ್ಲಿ ಸರ್ಕಾರದ ಜೊತೆಗೂಡಲು ಅವಕಾಶವನ್ನು ಆಸಕ್ತರಿಗೆ ಒದಗಿಸಿಕೊಡಲಾಗಿದ್ದು ಇದರಿಂದಾಗಿ ಗ್ರಾಮೀಣ ಕರ್ನಾಟಕದಲ್ಲಿ ನೀರು ಮತ್ತು ನೈರ್ಮಲ್ಯದ ಸವಾಲುಗಳನ್ನು ಎದುರಿಸುವ ಪರಿಣಾಮಕಾರಿ ತಾಂತ್ರಿಕ ಪರಿಹಾರಗಳನ್ನು ಕಂಡುಹಿಡಿಯುವ ಆಶಯವನ್ನು ಹೊಂದಲಾಗಿದೆ ಎಂದು ಸಚಿವರು ಹೇಳಿದ್ದಾರೆ. ಆಸಕ್ತರು ತಮ್ಮ ಪ್ರಸ್ತಾವನೆಗಳನ್ನು ಪಿಚ್ ಡೆಕ್ ಪ್ರಸ್ತಾವನೆಯೊಂದಿಗೆ ಅರ್ಜಿ ಸಲ್ಲಿಸಬಹುದು. ಗುಣಮಟ್ಟ ಆಧರಿಸಿ ಅಪ್ಲಿಕೇಶನ್ಗಳನ್ನು ಆಯ್ಕೆ ಮಾಡಲಾಗುತ್ತದೆ, ಅಂತಿಮವಾಗಿ ಶೃಂಗಸಭೆಯಂದು ಆಯ್ದ ನವೋದ್ಯಮಗಳು ತಮ್ಮ ಆಲೋಚನೆಯನ್ನು ಪ್ರಸ್ತುತ ಪಡಿಸಲು ಅವಕಾಶ ಹೊಂದಿರುತ್ತಾರೆ.

ಶೃಂಗಸಭೆ, ಅರ್ಜಿ ವಿವರಗಳು ಮತ್ತು ಸಮಸ್ಯೆ ಹೇಳಿಕೆಗಳ ಕುರಿತು ಹೆಚ್ಚಿನ ಮಾಹಿತಿಯನ್ನು ಲಿಂಕ್ ಬಳಸಿ ಪಡೆಯಬಹುದು. ಮಾಹಿತಿಗಾಗಿ ನಾಗರಾಜ್ ಭವಾನಿ ಮೊಬೈಲ್ ಅವರನ್ನು 9902844998ರ ಮೊಬೈಲ್ ಮೂಲಕ ಸಂಪರ್ಕಿಸಲು ಅವರು ಕೋರಿದ್ದಾರೆ.

# ನಾಡಹಬ್ಬ ದಸರಾ ಪ್ರಯುಕ್ತ ನಿಗಮದಿಂದ 280 ಹೆಚ್ಚುವರಿ ಬಸ್‌ಗಳ ಕಾರ್ಯಾಚರಣೆ

ಕಲಬುರಗಿ: ನಾಡಹಬ್ಬ ದಸರಾ ಪ್ರಯುಕ್ತ ಕ.ಕ. ರ.ಸಾ. ನಿಗಮದಿಂದ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಇದೇ ಅಕ್ಟೋಬರ್ 9 ರಿಂದ 11 ರವರೆಗೆ ಕ.ಕ.ರ.ಸಾ.ನಿಗಮದ ತಾಲ್ಲೂಕು/ಜಿಲ್ಲಾ ಕೇಂದ್ರಗಳಿಂದ ಬೆಂಗಳೂರಿಗೆ ಮತ್ತು ಇತರೆ ಪ್ರಮುಖ ಸ್ಥಳಗಳಿಗೆ ಹಾಗೂ ಅಕ್ಟೋಬರ್ 10 ರಿಂದ 12 ರವರೆಗೆ ಬೆಂಗಳೂರಿನಿಂದ ಕ.ಕ.ರ.ಸಾ.ನಿಗಮದ ವ್ಯಾಪ್ತಿಯ ವಿವಿಧಸ್ಥಳಗಳಿಗೆದೈನಂದಿನಕಾರ್ಯಾಚರಣೆಯಲ್ಲಿರುವ 196 ಸಾರಿಗೆಗಳನ್ನು ಹೊರತುಪಡಿಸಿ, 280 ಹೆಚ್ಚುವರಿ ಬಸ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ ಎಂದು ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದ್ದಾರೆ. ಹಬ್ಬ ಮುಗಿದ ನಂತರ ಮರಳಿ ಹೋಗುವ ಪ್ರಯಾಣಿಕರಿಗೆ ಅಕ್ಟೋಬರ್ 13 ರಿಂದ 16 ರವರೆಗೆ ಕ.ಕ.ರ.ಸಾ.ನಿಗಮದ ವ್ಯಾಪ್ತಿಯ ಎಲ್ಲಾ ಜಿಲ್ಲೆಗಳಿಂದ ಬೆಂಗಳೂರು ಮತ್ತು ಇತರೆ ಸ್ಥಳಗಳಿಗೆ ಸಂಚಾರ ದಟ್ಟಣೆಗನುಗುಣವಾಗಿ ಹೆಚ್ಚುವರಿ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ಸಾರಿಗೆಗಳಿಗೆ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಸೌಲಭ್ಯವನ್ನು ಸಹ ಕಲ್ಪಿಸಲಾಗಿದೆ. ಕರ್ನಾಟಕ ಹಾಗೂ ಅಂತರ ರಾಜ್ಯದಲ್ಲಿ ಇರುವ 16 ಗಣಕೀಕೃತ ಬುಕ್ಕಿಂಗ್ ಕೌಂಟಬಿಗಳ ಮುಖಾಂತರ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸಬಹುದಾಗಿದೆ. ಪ್ರಯಾಣಿಕರು ಬಸ್‌ನಿಲ್ದಾಣಗಳಿಗೆ ತೆರಳುವ ಮುನ್ನ ಮುಂಗಡ ಕಾಯ್ದಿರಿಸಲಾಗುವ ಟಿಕೇಟುಗಳ ಮೇಲೆ ನಮೂದಿಸಲಾಗಿರುವ ಬಸ್ ನಿಲ್ದಾಣ/ ಪಿಕ್ ಅಪ್ ಪಾಯಿಂಟ್‌ನ ಹೆಸರನ್ನು ಗಮನಿಸಬೇಕು. ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಟಿಕೇಟ್ ಕಾಯ್ದಿರಿಸಿದಲ್ಲಿ ಶೇ 5ರಷ್ಟು ರಿಯಾಯಿತಿ ಹಾಗೂ ಹೋಗುವ ಮತ್ತು ಬರುವ ಪ್ರಯಾಣದ ಟಿಕೇಟನ್ನು ಒಟ್ಟಿಗೆ ಕಾಯ್ದಿರಿಸಿದ್ದಲ್ಲಿ ಬರುವ ಪ್ರಯಾಣ ದರದಲ್ಲಿ ಶೇ 10 ರಷ್ಟು ರಿಯಾಯತಿ ನೀಡಲಾಗುತ್ತದೆ. ಇದಲ್ಲದೇ ನಿಗಮದ ಕಾರ್ಯಾಚರಣೆ ವ್ಯಾಪ್ತಿಯಲ್ಲಿನ ಎಲ್ಲಾ ತಾಲ್ಲೂಕು/ಜಿಲ್ಲಾ ಬಸ್ ನಿಲ್ದಾಣಗಳಿಂದ ಸಂಚಾರ ಒತ್ತಡಕ್ಕನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು, ಸಾರ್ವಜನಿಕ ಪ್ರಯಾಣಿಕರು ಈ ಸಾರಿಗೆ ಸೌಲಭ್ಯದ ಸದುಪಯೋಗಪಡೆದುಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

# ರೇಡಿಯೋ ದೂರದರ್ಶನ ಮೂಲಕ ಕಾಸ್ಮಾಲಜಿಯ ಉತ್ತಮದ ಕುರಿತು ಉಪನ್ಯಾಸ:ಕುಮಾರಿ ಅಕ್ಷತಾ ವೈದ್ಯ

ಕಲಬುರಗಿ: ಅಕ್ಟೋಬರ್ 4, 1957 ರ ಮಾನವ ಇತಿಹಾಸದಲ್ಲಿ ಮಹತ್ವವಾದ ದಿನ ಅಂದು ಪ್ರಪಂಚದಲ್ಲಿಯೇ ಮಾನವ ಮೊಟ್ಟ ಮೊದಲ ಬಾರಿಗೆ ತಯಾರಿಸಿದ ಕೃತಕ ಉಪಗ್ರಹವಾದ ಸ್ಪುಟ್ನಿಕ್ ಅನ್ನು ರಷ್ಯಾ ದೇಶವು ಉಡಾವಣೆ ಮಾಡಿತು. ಈ ಹಿನ್ನಲೆಯಲ್ಲಿ ವಿಶ್ವ ಬಾಹ್ಯಾಕಾಶ ಸಪ್ತಾಹವನ್ನು ಪ್ರಪಂಚದಾದ್ಯಂತ ಆಚರಿಸಲಾಗುತ್ತದೆ ಎಂದು ಅಮೇರಿಕದ ಅರಿಜೋನ ವಿಶ್ವವಿದ್ಯಾಲಯದಲ್ಲಿ ಸಂಶೋಧನೆ ಮಾಡುತ್ತಿರುವ ಕುಮಾರಿ ಅಕ್ಷತಾ ವೈದ್ಯ ವಿಶೇಷ ಉಪನ್ಯಾಸ ನೀಡಿದರು.

ಮಂಗಳವಾರದಂದು ರೇಡಿಯೋ ದೂರದರ್ಶನ ಮೂಲಕ ಕಾಸ್ಮಾಲಜಿಯ ಉತ್ತಮದ ಕುರಿತು ಸಸಿಗೆ ನೀರೆರೆಯುವುದರ ಮೂಲಕ ಉದ್ಘಾಟಿಸಿ ಮಾತನಾಡಿ, ನಾನು ಮೂಲತ: ರಾಯಚೂರಿನವರು ಪ್ರಾಥಮಿಕ ಶಿಕ್ಷಣ ಮುಗಿಸಿ ತದನಂತರ ಬೆಂಗಳೂರಿನ ಆರ್.ವಿ ಕಾಲೇಜಿನಿಂದ ಇ & ಇಅ ಯಲ್ಲಿ ಇಂಜಿನಿಯರಿಂಗ್ ಪದವಿ ಪಡೆದು ಐದು ವರ್ಷಗಳಿಂದ ಅಮೇರಿಕದಲ್ಲಿ ಸಂಶೋಧನಲ್ಲಿ ಕೇಂದ್ರದಲ್ಲಿ ಇದ್ದೇನೆ ಎಂದರು.



ಖಗೋಳಶಾಸ್ತ್ರದಲ್ಲಿ ಸಂಶೋಧನೆ ವಿಪುಲ ಅವಕಾಶಗಳು ಇದ್ದರೂ ಕೂಡ ಅದರ ಕುರಿತು ನಮಗೆ ಅರಿವಿಲ್ಲದ ಕಾರಣ, ಈ ಕ್ಷೇತ್ರದಲ್ಲಿ ಸಂಶೋಧನೆ ಮಾಡಲು ಎಲ್ಲಿಗೆ ಹೋಗಬೇಕು. ಎಂದು ತಿಳಿಯದ ಕಾರಣ ನಮ್ಮ ದೇಶದ ಯುವ ಪೀಳಿಗೆ ಈ ದೇಸೆಯಲ್ಲಿ ಕೆಲಸ ಮಾಡುತ್ತಿಲ್ಲ ಬೆಂಗಳೂರಿನ ರಾಮನ್ ರಿಸರ್ಚ್ ಭಾರತೀಯ ವಿಜ್ಞಾನ ಮಂದಿರ ಬೆಂಗಳೂರು ಹಾಗೂ ದೇಶದಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದರು ತಿಳಿಸಿದರು. ಮುಂದಿನ 10 ವರ್ಷಗಳಲ್ಲಿ ರೇಡಿಯೋ ಅಸ್ತ್ರಾನಮಿ ಬ್ರಹ್ಮಾಂಡದ ಉಗಮದ ಬಗ್ಗೆ ಒಂದು ಹೊಸ ದಿಕ್ಕನ್ನು ತೋರಿಸಲಿದೆ ಮಹಾ ಭಾಜನ ಕ್ರಿಯೆಯಿಂದ ಉಗಮವಾದ ಬ್ರಹ್ಮಾಂಡ ತದನಂತರ ಹುಟ್ಟಿಕೊಂಡ ವಿವಿಧ ಆಕಾಶಕಾಯಗಳ ಬಗ್ಗೆ ಹಲವಾರು ಕುತೂಹಲಕಾರಿ ಅಂಶಗಳು ನಮಗೆ ತಿಳಿಯುವುದರಲ್ಲಿ ಸಂದೇಹವಿಲ್ಲ ಎಂದು ಅಕ್ಷತಾ ತಿಳಿಸಿದರು.ಇದಕ್ಕಾಗಿ ಜನವಸತಿಯಿಂದ ಮತ್ತು ಮಾನವ ನಿರ್ಮಿತ ವಿವಿಧ ತರಂಗಾಂತರಗಳಿಂದ ದೂರವಿರುವ ನಿರ್ಜನ ಪ್ರದೇಶದಲ್ಲಿ ಈ ಸಂಶೋಧನೆಯನ್ನು ಮಾಡಲು ರೇಡಿಯೋ ಅಸ್ತ್ರಾನಮಿ ವೀಕ್ಷಣಾಲಯವನ್ನು ನಿರ್ಮಿಸಲಾಗಿದ್ದು ಅಲ್ಲಿ ವಿಜ್ಞಾನಿಗಳು ತಮ್ಮ ಸಂಶೋಧನೆ ಮಾಡುತ್ತಿದ್ದಾರೆ. ರೇಡಿಯೋ ಖಗೋಳಶಾಸ್ತ್ರ ಮೂಲಕ ಬ್ರಹ್ಮಾಂಡದ ಉಗಮದ ಬಗ್ಗೆ ಹೊಸ ಬೆಳಕನ್ನು ಚೆಲ್ಲುವ ಪ್ರಯೋಗಗಳು ನಡೆಯುತ್ತಿರುವುದರ ಬಗ್ಗೆ ಮತ್ತು ತಾವು ಅದರಲ್ಲಿ ತೊಡಗಿಸಿಕೊಂಡ ಬಗೆಯನ್ನು ಸೇರಿದ ವಿದ್ಯಾರ್ಥಿಗಳೊಂದಿಗೆ ಶಿಕ್ಷಕರೊಂದಿಗೆ ಹಂಚಿಕೊಂಡರು. ಈ ಸಂದರ್ಭದಲ್ಲಿ ಜಿಲ್ಲಾ ವಿಜ್ಞಾನ ಕೇಂದ್ರದ ಜಿಲ್ಲಾ ವಿಜ್ಞಾನ ಅಧಿಕಾರಿ. ಕೆ.ಎಮ್ ಸುನೀಲ. ನಿವೃತ್ತ ಜಿಲ್ಲಾ ವಿಜ್ಞಾನ ಅಧಿಕಾರಿ ಲಕ್ಷ್ಮೀ ನಾರಾಯಣ, ನಾಸದ ನಿವೃತ್ತ ವಿಜ್ಞಾನಿ ನಾರಾಯಣ ಇನಾಂದಾರ, ಶಿಕ್ಷಣಾಧಿಕಾರಿ ಎನ್.ಪೋನಸ್ ವಿವಿಧ ಶಿಕ್ಷಣ ಮಹಾವಿದ್ಯಾಲಯ ಸರಕಾರಿ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಉಪಸ್ಥಿತರಿದರು.

# ಶೈಕ್ಷಣಿಕ ಸುಧಾರಣಾ ಸಮಿತಿಗೆ ಗುರುರಾಜ ಕರಜಗಿ ನೇಮಕ ಖಂಡನೀಯ: ವೆಲ್ಫೇರ್ ಪಾರ್ಟಿ

ಕಲಬುರಗಿ : ಶೈಕ್ಷಣಿಕ ಸುಧಾರಣಾ ಸಮಿತಿಯ ನೇತೃತ್ವವನ್ನು ಸಂಘ ಪರಿವಾರ ಹಿನ್ನೆಲೆಯ ಗುರುರಾಜ ಕರಜಗಿಯವರನ್ನು ನೇಮಕ ಮಾಡಿದ ಸರಕಾರದ ಕ್ರಮ ಖಂಡನೀಯ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಇದರ ರಾಜ್ಯ ಕಾರ್ಯದರ್ಶಿ ಮುಬೀನ್ ಅಹ್ಮದ್ ಹೇಳಿದ್ದಾರೆ.



ಸರ್ಕಾರದ ಇಂತಹ ನಡೆ ನೋಡಿದಾಗ ಜನರಿಗೆ ಈಗ ಆಡಳಿತದಲ್ಲಿರುವುದು ಕಾಂಗ್ರೆಸ್ ಸರಕಾರವೋ ಅಥವಾ ಬಿಜೆಪಿ ಸರಕಾರವೋ ಎಂಬ ಅನುಮಾನ ಮೂಡುವಂತಿದೆ. ಶಿಕ್ಷಣದ ಸುಧಾರಣಾ ಸಮಿತಿಯಂತಹ ಮಹತ್ವದ ಹುದ್ದೆಗಳಿಗೆ ನೇಮಕ ಮಾಡುವಾಗ ಅವರ ಹಿನ್ನೆಲೆ ಅರಿಯುವಂತಹ ವ್ಯವಧಾನ ಸರಕಾರಕ್ಕೆ ಇಲ್ಲದಾಯಿತೇ? ಇಂತಹವರ ನೇಮಕಾತಿಗೆ ಶಿಫಾರಸು ಮಾಡುವವರು ಎಂಬ ಬಗ್ಗೆಯೂ ಜನರಿಗೆ ಸಂಶಯವಿದೆ.

ಶಿಕ್ಷಣ ಕ್ಷೇತ್ರವನ್ನು ಶ್ರೀಮಂತಗೊಳಿಸುವುದು ಬಿಟ್ಟು ಹಾಳು ಮಾಡಲು ಅವಕಾಶ ಮಾಡಿಕೊಡುವ ಸರಕಾರದ ನಿರ್ಧಾರ ವನ್ನು ವೆಲ್ಫೇರ್ ಪಾರ್ಟಿ ತೀವ್ರವಾಗಿ ಖಂಡಿಸುತ್ತಿದೆ. ಸರಕಾರ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕಾಗಿದೆ. ಕನ್ನಡ ನಾಡಿನಲ್ಲಿ ಆ ಹುದ್ದೆಗೆ ಅರ್ಹರಾದ ಹಲವಾರು ಮಂದಿಯಿದ್ದರೂ ಅತ್ತ ಗಮನ ಹರಿಸದೆ ಸಂಘಪರಿವಾರ ಹಿನ್ನೆಲೆಯ ವ್ಯಕ್ತಿಗಳನ್ನು ತಂದು ಕೂರಿಸುವ ಉದ್ದೇಶವಾದರೂ ಏನು? ಎಂದೂ ಅವರು ಸರಕಾರವನ್ನು ಪ್ರಶ್ನಿಸಿದ್ದಾರೆ.

# ಸಂತ ಜೇವಿಯರ್ಸ್ ಕಾಲೇಜಿನಲ್ಲಿ "ಕಲಾ ಮೇಳ ಉತ್ಸವ"



ಕಲಬುರಗಿ: ನಗರದ ಹೊರ ವಲಯದಲ್ಲಿರುವ ಸಂತ ಜೇವಿಯರ್ಸ್ ಪದವಿ ಪೂರ್ವ ಕಾಲೇಜಿನ ವಾಣಿಜ್ಯ ವಿಭಾಗದ ವತಿಯಿಂದ "ಕಲಾ ಮೇಳ ಉತ್ಸವ", "ನಮ್ಮ ನಡೆ ಜ್ಞಾನದ ಕಡೆ' ಅರ್ಥಪೂರ್ಣವಾದ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿದ ಎಸ್‌ಎಮ್‌ಎಸ್ ವಿಭಾಗೀಯ ಅಧಿಕಾರಿ ಡಾ.ಚಂದ್ರಶೇಖರ ದೊಡ್ಡಮನಿ ಅವರು, "ನನ್ನ ಮತ ನನ್ನ ರಕ್ಷಣೆ' ಎನ್ನುವ ವಿಷಯದ ಮೇಲೆ ಪೂರ್ವದ ಇತಿಹಾಸದಿಂದ ಹಿಡಿದು ಪ್ರಸ್ತುತದಲ್ಲಿ ಮತದಾನದ ಕುರಿತು ಅರ್ಥಪೂರ್ಣವಾಗಿ ಮಾತನಾಡಿದರು. ಎರಡನೆಯ ವಿಚಾರ ಗೋಷ್ಠಿಯ ಮಾರ್ಗದರ್ಶಕರಾಗಿ ಆಗಮಿಸಿರುವ ಪಂಡಿತ ಕೆ ಅವರು ಕರಿಯರ ಗೈಡನ್ಸ ಬಗ್ಗೆ ಮತ್ತು ಪಿಯುಸಿ ನಂತರ ಸ್ಪರ್ಧೆಯಲ್ಲಿ ಹೇಗೆ ಓದಿಕೊಳ್ಳಬೇಕು ಮತ್ತು ನಮ್ಮ ಆಸಕ್ತಿ ಕಳೆದುಕೊಳ್ಳಬಾರದೆಂದು ಹೇಳಿದರು. ವಿದ್ಯಾರ್ಥಿಗಳ ವಿವಿಧ ಪ್ರಶ್ನೆಗಳಿಗೆ ಉತ್ತರಿಸಿದರು.

ಕಾಲೇಜಿನ ಪ್ರಾಂಶುಪಾಲರಾದ ರೆ.ವಂ.ಫಾ.ಜಾನ್ ಥಾಮಸ್ 'ಕಲಾ ಮೇಳ ಉತ್ಸವದ' ಕುರಿತು ಹರ್ಷವನ್ನು ವ್ಯಕ್ತಪಡಿಸಿದರು. ಸಮಾರೋಪ ಕಾರ್ಯಕ್ರಮದಲ್ಲಿ ಹಣಕಾಸು ಅಧಿಕಾರಿ ವ.ಗು.ಆನಂದ ಪ್ರಭು ಎಸ್.ಜೆ. ಅವರು ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರದಾನ ಮಾಡಿದರು. ಕಲಾ ವಿಭಾಗದ ವಿದ್ಯಾರ್ಥಿಗಳಿಂದ ವಸ್ತು ಪ್ರದರ್ಶನವನ್ನು ಏರ್ಪಡಿಸಿತ್ತು.

ಉಪ ಪ್ರಾಂಶುಪಾಲರದ ಜಗದೀಶ್ ದೊಡ್ಡಮನಿ, ಕಲಾ ವಿಭಾಗದ ಮುಖ್ಯಸ್ಥರು ಮತ್ತು ಕಾರ್ಯಕ್ರಮದ ಸಂಯೋಜಕರಾದ ಡಾ.ಮಹೇಶ ಎಸ್.ರುದ್ರಕರ್ ಹಾಗೂ ವಿಜ್ಞಾನ ವಿಭಾಗದ ಮುಖ್ಯಸ್ಥರಾದ ಮೇರಿ ಸುಪ್ರೀತಾ ಮತ್ತು ಆಂಗ್ಲಾ ಉಪನ್ಯಾಸಕರಾದ ಫಾ. ರೋಶನ್ ಪಿಂಟೋ, ಉಪಸ್ಥಿತರಿದ್ದರು. ಇತಿಹಾಸದ ಉಪನ್ಯಾಸಕರಾದ ಸಿದ್ದಣ್ಣ ಎಸ್.ಕಲ್ಮನಿ , ಮತ್ತು ಆಂಗ್ಲ ಭಾಷೆಯ ಉಪನ್ಯಾಸಕರಾದ ವಿಶ್ವನಾಥ ಮತ್ತು ಸಮಾಜಶಾಸ್ತ್ರ ಉಪನ್ಯಾಸಕರಾದ ಮಾಧವರಾವ್ ತೋಳೆ, ಅರ್ಥಶಾಸ್ತ್ರದ ಉಪನ್ಯಾಸಕರಾದ ಅವಿನಾಸ ಸಿ.ಫೆಲಿಕ್ಸ್ "ಕಲಾ ಮೇಳ ಉತ್ಸವ" ಕುರಿತು ಸಂತಸವನ್ನು ವ್ಯಕ್ತಪಡಿಸಿದರು. ಈ ಕಾರ್ಯಕ್ರಮದಲ್ಲಿ ಕಾಲೇಜಿನ ಎಲ್ಲ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಯವರು ಉಪಸ್ಥಿತರಿದ್ದರು. ವಿದ್ಯಾರ್ಥಿಗಳಾದ ಕು.ರೇಖಾ ಮತ್ತು ತಂಡದವರು ಪ್ರಾರ್ಥನೆ ಗೀತೆಯನ್ನು ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿನಿ ಕು.ಶ್ವೇತಾ ಸ್ವಾಗತವನ್ನು, ಕು. ಮಹಾಂತೇಶ ನಿರೂಪಣೆಯನ್ನು ನಡೆಸಿಕೊಟ್ಟರು.

# ಮಹರ್ಷಿ ವಾಲ್ಮೀಕಿ ಜಯಂತಿ ಅದ್ದೂರಿಯಾಗಿ ಆಚರಿಸಲು ನಿರ್ಧಾರ:ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ

ಕಲಬುರಗಿ: ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲು ಸಭೆಯಲ್ಲಿ ನಿರ್ಧಾರಿಸಲಾಯಿತು

ಮಂಗಳವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಮಾತನಾಡಿದರು. ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅಕ್ಟೋಬರ್ 17 ರಂದು ನಡೆಯುವ ಶ್ರೀ ವಾಲ್ಮೀಕಿ ಜಯಂತ್ಯೋತ್ಸವ ಕಾರ್ಯಕ್ರಮಕ್ಕೆ ಅಧಿಕಾರಿಗಳು ತಮ್ಮ ತಮ್ಮ ಕಚೇರಿಗಳಲ್ಲಿ 9 ಗಂಟೆಗೆ ಆಚರಣೆ ಮಾಡಿ ಡಾ. ಎಸ್.ಎಂ. ಪಂಡಿತ ರಂಗ ಮಂದರಕ್ಕೆ 12 ಗಂಟೆಗೆ ಆಗಮಿಸಲು ಅಧಿಕಾರಿಗಳಿಗೆ ಸಮಾಜದ ಮುಖಂಡರುಗಳಿಗೆ ತಿಳಿಸಿದರು. ಅಂದು ಬೆಳಿಗ್ಗೆ 10.30 ಗಂಟೆಗೆ ಸರ್ದಾರ ವಲ್ಲಭಬಾಯಿ ಪಟೇಲ ವೃತ್ತದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮೆರವಣಿಗೆಯನ್ನು ಪ್ರಾರಂಭಿಸಿ ಮಧ್ಯಾಹ್ನ 12 ಗಂಟೆಗೆ ರಂಗಮಂದರದಲ್ಲಿ ಕಾರ್ಯಕ್ರಮ ಜರುಗಿಸಲಾಗುವುದು ಎಂದು ಹೇಳಿದರು. ಬೆಳಿಗ್ಗೆ 9 ಗಂಟೆಗೆ ಸರ್ಕಾರಿ ಅರೆ ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ಎಲ್ಲಾ ತಾಲ್ಲೂಕ ಪಂಚಾಯತಿಗಳಲ್ಲಿ ಗ್ರಾಮಪಂಚಾಯಿತಿಗಳಲ್ಲಿ ಕಡ್ಡಾಯವಾಗಿ ಆಚರಿಸಲು ಸೂಚಿಸಿದರು. ವೇದಿಕೆಗೆ ಹೂದಾನಿಗಳಿಂದ ಆಲಂಕರಿಸುವುದು,



ಜಯಂತ್ಯೋತ್ಸವ ಕಾರ್ಯಕ್ರಮ ಆಯೋಜಿಸುವುದು ಆಮಂತ್ರಣ ಪತ್ರಿಕೆಗಳನ್ನು ಬ್ಯಾಡ್ಜಸ್ ಹಾಗೂ ಬ್ಯಾನರಗಳನ್ನು ಪ್ರದರ್ಶಿಸುವುದು ಮತ್ತು ಆಮಂತ್ರಣ ಪತ್ರಿಕೆಗಳನ್ನು ಹಂಚುವುದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ಎಸ್. ಎಸ್.ಎಲ್.ಸಿ. ಮತ್ತು ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗೆ ಜಿಲ್ಲೆಯ ಅತಿ ಹೆಚ್ಚು ಅಂಕಪಡೆದು ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಗುವುದು ಎಂದರು ಕಳೆದ ವರ್ಷದಂತೆ ಈ ವರ್ಷವೂ ರೆಡೆಕ್ರಾಸ್ ಸಂಸ್ಥೆಯಿಂದ 2000 ರೂಗಳನ್ನು ನೀಡಲು ಸರ್ವಾನುಮತದಿಂದ ಸಭೆಯಲ್ಲಿ ನಿರ್ಣಯಿಸಲಾಯಿತು. ಒಬ್ಬ ನುರಿತ ಉಪನ್ಯಾಸಕರನ್ನು ಕರೆ ತರಲು ಸಮಾಜ ಕಲ್ಯಾಣ ಇಲಾಖೆ ಅಪರ ನಿರ್ದೇಶಕರಾದ ಎಂ.ಎನ್. ಅಲ್ಲಾಬಕಾಷ್ ಅವರಿಗೆ ನಿರ್ದೇಶನ ನೀಡಿದರು.ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಡೊಳ್ಳು ಕುಣಿತ, ಇತರೆ ಸಾಂಸ್ಕೃತಿ ಕಾರ್ಯಕ್ರಮಗಳ ಆಯೋಜನೆ ಮಾಡುವುದು ರಂಗಮಂದಿರದಲ್ಲಿ ಸ್ಥಳೀಯ ಕಲಾವಿದರಿಂದ ಪ್ರಾರ್ಥನೆ ಭಜನೆ, ನಾಡಗೀತೆ ಹಾಡಿಸುವ ವ್ಯವಸ್ಥೆ ಮಾಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ ಅವರಿಗೆ ಸೂಚನೆ ನೀಡಿದರು. ಪೋಲಿಸ್ ಬಂದೋಬಸ್ತ್ ಶಾಲಾ ಕಾಲೇಜಿನ ವಿದ್ಯಾರ್ಥಿಗಳು ವಸತಿ ನಿಲಯದ ವಿದ್ಯಾರ್ಥಿಗಳಿಗೆ ಕರೆತರುವ ವ್ಯವಸ್ಥೆ ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ಡಾ. ಎಸ್.ಎಂ. ಪಂಡಿತ ರಂಗಮಂದಿರದಲ್ಲಿ ಸ್ವಚ್ಛತೆ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಮಾಡುವುದು ಶ್ರೀ ಮಹರ್ಷಿ ವಾಲ್ಮೀಕಿ ವೃತ್ತ ರಾಮಮಂದಿರದಲ್ಲಿ ಹತ್ತಿರ ಸ್ವಚ್ಛತೆ ಮಾಡುವುದು ರಂಗಮಂದಿರದಲ್ಲಿ ಕುಡಿಯುವ ನೀರಿ ಚಹಾ ಬಿಸ್ಕಿಟ್ ಹಾಗೂ ಅಲ್ಪ ಉಪಹಾರ, ಛಾಯಾ ಗ್ರಾಹಕರ ವ್ಯವಸ್ಥೆ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲು ಬಿಡಿ ಹೂ ಹಾಗೂ ಪೂಜಾ ಸಾಮಗ್ರಿ ಮತ್ತು ರಂಗ ಮಂದಿರದಲ್ಲಿ ಮೈಕ್ ಸೆಟ್ ಹಾಗೂ ಖರ್ಚಿಗಳನ್ನ ವ್ಯವಸ್ಥೆ ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸರ್ದಾರ ವಲ್ಲಭಬಾಯಿ ಪಟೇಲ್ ವೃತ್ತದಿಂದ ಎಸ್.ಎಂ. ಪಂಡಿತ ರಂಗಮಂದಿರದ ವರೆಗೆ 101 ಮಹಿಳೆಯರು ಕುಂಬ ಕಳಸದೊಂದಿಗೆ ಮೆರವಣಿಗೆಯಲ್ಲಿ ಭಾಗವಹಿಸುವ ವ್ಯವಸ್ಥೆ ಮಾಡಲು ತಿಳಿಸಲಾಯಿತು. ರಾಜ್ಯ ಎಸಿ/ಎಟಿ ನಕಲಿ ಜಾತಿ ಪ್ರಮಾಣ ಪತ್ರಗಳ ತಡೆ ಸಮಿತಿ ಅಧ್ಯಕ್ಷ ಶ್ರವಣ ಕುಮಾರ ಡಿ ನಾಯಕ, ಸರದಾರ ವಲ್ಲಭಭಾಯಿ ಪಟೇಲ್, ವೃತ್ತ ಹಾಗೂ ರಾಮಮಂದಿರ ಹತ್ತಿರ ಇರುವ ಶ್ರೀ ಮಹರ್ಷಿ ವಾಲ್ಮೀಕಿ ವೃತದಲ್ಲಿ ಸುತ್ತಮುತ್ತ ವಿದ್ಯುತ್ ದೀಪಗಳ ಅಲಂಕಾರ ಮಾಡಲು ತಮ್ಮ ಸಲಹೆ ಸೂಚನೆ ನೀಡಿದರು. ವೇದಿಕೆ ಮೇಲೆ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಜಗದೇವ, ಸೇರಿದಂತೆ ಎ.ಸಿ.ಪಿ. ಸುಧಾ, ಡಿಯುಡಿಸಿ ಯೋಜನಾ ನಿರ್ದೇಶಕ ಮುನ್ನವರ್ ದೌವಲ್, ಕಲ್ಯಾಣ ಕರ್ನಾಟಕ ಪ್ರದೇಶದ ವಾಲ್ಮೀಕಿ ನಾಯಕ ವಿಭಾಗದ ಸಮಿತಿ ಅಧ್ಯಕ್ಷ ನಂದಕುಮಾರ ಮಾಲಿಪಾಟೀಲ, ವಾಲ್ಮೀಕಿ ಜಿಲ್ಲಾ ಅಧ್ಯಕ್ಷ ಶರಣು ಬಿ ಸುಬೇದಾರ್, ಸಮಾಜ ಕಲ್ಯಾಣ ಇಲಾಖೆ ಜಾಗೃತಿ ಸಮಿತಿ ಸದಸ್ಯ ಆಕಾಶ ಪರಚಾ, ಸಮಾಜದ ಮುಖಂಡರಾದ ಚನ್ನಪ್ಪ ಸುರಪೂರಕರ್, ಗುರುರಾಜ್ ನರಿಗೋಳ, ವೆಂಕಟೇಶ, ಕವಲದಾರ, ಮಾರುತಿ ಜಮಾದಾರ್ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

# ಡಿಜಿಟಲ್ ಮಾರುಟ್ಟೆ ವಿಚಾರ ಸಂಕಿರಣ:ನಕಲಿ ಉತ್ಪನ್ನಗಳಿಗೆ ಸರ್ಕಾರ ಕಡಿವಾಣ ಹಾಕಬೇಕಿದೆ

ಕಲಬುರಗಿ: ಡಿಜಿಟಲ್ ಮಾರುಕಟ್ಟೆ ದಿನದಿಂದ ದಿನಕ್ಕೆ ವ್ಯಾಪಕವಾಗಿ ತನ್ನ ವಿಸ್ತಾರ ಹೆಚ್ಚಿಸಿಕೊಳ್ಳುತ್ತಿದ್ದು, ಆನ್‌ಲೈನ್ ಮೂಲಕ ನಡೆಯುವ ನಕಲಿ ಉತ್ಪನ್ನಗಳ ಮಾರಾಟದ ಹಾವಳಿಗೆ ಸರ್ಕಾರ ಕಡಿವಾಣ ಹಾಕಬೇಕಿದೆ ಎಂದು ಕೆ.ಕೆ.ಸಿ.ಸಿ.ಐ ಅಧ್ಯಕ್ಷ ಶಶಿಕಾಂತ ಪಾಟೀಲ್ ಹೇಳಿದರು.

ಮಂಗಳವಾರ ಕೇಂದ್ರ ಸರ್ಕಾರದ ಎಂ. ಎಸ್.ಎಂ.ಇ ಅಭಿವೃದ್ಧಿ ಮತ್ತು ಸೌಲಭ್ಯ ಕೇಂದ್ರ, ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ಕಲ್ಯಾಣ ಕರ್ನಾಟಕ ಚೆಂಬರ್ ಆಫ್ ಕಾಮರ್ಸ್ ಸಂಸ್ಥೆ ಸಹಯೋಗದಲ್ಲಿ ಕಲಬುರಗಿ ನಗರದ ಸೂಪರ್ ಮಾರ್ಕೆಟ್ ಪ್ರದೇಶದಲ್ಲಿನ ಚೆಂಬರ್ ಆಫ್ ಕಾಮರ್ಸ್ ಸಭಾಂಗಣದಲ್ಲಿ ಆಯೋಜಿಸಿದ ಡಿಜಿಟಲ್ ಮಾರುಕಟ್ಟೆ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದ ಅವರು ಕಳೆದ 15 ವರ್ಷದಲ್ಲಿ ಡಿಜಿಟಲ್ ಮಾರುಕಟ್ಟೆ ಬಹಳಷ್ಟು ಬದಲಾವಣೆ ಕಂಡಿದೆ ಎಂದರು. ಆನ್‌ಲೈನ್ ಮಾರುಕಟ್ಟೆಇಯಿಂದ ಅನುಕೂಲ ಮತ್ತು ಅನಾನುಕೂಲ ಎರಡು ಇದ್ದು, ಗ್ರಾಹಕರು ಎಚ್ಚರಿಕೆಯಿಂದ ವ್ಯವಹಾರ



ಮಾಡಬೇಕಿದೆ. ನಕಲಿ ಉತ್ಪನ್ನಗಳನ್ನು ಉಪಯೋಗಿಸಿದರಿಂದ ಗ್ರಾಹಕರು ಅಡ್ಡ ಪರಿಣಾಮಗಳಿಗೆ ಒಳಗಾಗುತ್ತಾರೆ. ಹೀಗಾಗಿ ಸರ್ಕಾರ ನಕಲಿ ಉತ್ಪನ್ನಗಳ ಮಾರಾಟಕ್ಕೆ ನಿಯಂತ್ರಿಸಬೇಕಿದೆ ಎಂದು ಒತ್ತಿ ಹೇಳಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಉದ್ಯಮಿ ಉಮಕಾಂತ ನಿಗ್ಗುಡಗಿ ಮಾತನಾಡಿ ಜಗತ್ತಿನಲ್ಲಿಯೇ ಭಾರತವು 3ನೇ ಪ್ರಬಲ ಆರ್ಥಿಕ ರಾಷ್ಟ್ರವಾಗಿ ಹೊರಹೊಮ್ಮಿದೆ. ಇದರಲ್ಲಿ ಬಹುಪಾಲು ಶ್ರೇಯಸ್ಸು ಕರ್ನಾಟಕ ಒಳಗೊಂಡಂತೆ ದಕ್ಷಿಣ ರಾಜ್ಯಗಳಿಗೆ ಸಲ್ಲಬೇಕು ಎಂದ ಅವರು, ಕಲಬುರಗಿಯಲ್ಲಿ ಬೆಳೆಯುವ ತೊಗರಿ ಏಷ್ಯಾ ರಾಷ್ಟ್ರಗಳಿಗೆ ಶೇ.20ರಷ್ಟು ರಫ್ತಾಗಲಿದೆ. ಸಿಮೆಂಟ್ ಉತ್ಪಾದನೆ ಈ ಭಾಗದಲ್ಲಿ ಹೆಚ್ಚಿದರು ಜಿಲ್ಲೆ ಪ್ರಗತಿಯಲ್ಲಿ ಹಿಂದುಳಿದಿದ್ದು ದುರ್ದೈವದ ಸಂಗತಿಯಾಗಿದೆ. ಉತ್ಪನ್ನ ಬೆಳೆಯುವುದಕ್ಕಿಂತ ಮಾರ್ಕೆಟಿಂಗ್ ಬಹಳ ಮಹತ್ವದಾಗಿದ್ದು, ಉದ್ಯಮಿಗಳನ್ನು ಇದನ್ನರಿತು ಮಾರ್ಕೆಟಿಂಗ್ ಮಾಡುವತ್ತ ಹೆಚ್ಚು ಗಮನಹರಿಸಬೇಕಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಂ.ಎಸ್.ಎಂ.ಇ. ಹುಬ್ಬಳ್ಳಿ ಕಛೇರಿಯ ಮುಖ್ಯಸ್ಥ ಬಿ.ಎಸ್.ಜವಳಗಿ ಮಾತನಾಡಿ, ಡಿಜಿಟಲ್ ಮಾರ್ಕೆಟಿಂಗ್ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಈ ವಿಚಾರ ಸಂಕಿರಣ ಆಯೋಜಿಸಲಾಗಿದೆ. ಅನ್‌ಲೈನ್ ಮಾರ್ಕೆಟಿಂಗ್‌ನಲ್ಲಿ ಕೇವಲ ಸ್ಥಳೀಯವಾಗಿ ಮಾರಾಟ ಮಾಡಿದರೆ ಸಾಲದು, ರಾಷ್ಟ್ರ-ಅಂತರಾಷ್ಟ್ರೀಯ ಮಟ್ಟಕ್ಕೂ ಇದನ್ನು ಕೊಂಡೊಯ್ಯಬೇಕಿದೆ. ಉತ್ಪನಗಳ ಸಂಸ್ಕರಣೆ ಮತ್ತು ಬ್ರ್ಯಾಂಡ್ ಒದಗಿಸುವ ನಿಟ್ಟಿನಲ್ಲಿ ಎಂ.ಎಸ್.ಎಂ.ಇ. ಸಹಕಾರ ನೀಡಲಿದೆ ಎಂದರು. ವಿಚಾರ ಸಂಕಿರಣದಲ್ಲಿ ಎಂ.ಎಸ್.ಎಂ.ಇ. ಹುಬ್ಬಳ್ಳಿ ಕಚೇರಿಯ ಸಹಾಯಕ ನಿರ್ದೇಶಕ ಡಿ.ಕಿರಣಕುಮರ್, ಕಲಬುರಗಿ ಶಾಖಾ ಕಚೇರಿಯ ಸಹಾಯಕ ನಿರ್ದೇಶಕಿ ಎ.ಸುಬ್ಬಲಕ್ಷ್ಮೀ, ಕಾಸಿಯಾ ಸಂಸ್ಥೆಯ ಕಲಬುರಗಿ ವಿಭಾಗದ ಚೆನ್ನಬಸಯ್ಯ ಜಿ.ನಂದಿಕೋಲ, ಕೆ.ಕೆ.ಸಿ.ಸಿ.ಐ ಕಾರ್ಯದರ್ಶಿ ಮಂಜುನಾಥ ಜೇವರ್ಗಿ, ಕಲಬುರಗಿಯ ಡಿಜಿನೇರ್ ಟೆಕ್ನಾಲಾಜಿಸ್ ಸಂಸ್ಥೆಯ ಸಿ.ಇ.ಓ ಆಕಾಶ ತೊನಸನಳ್ಳಿ ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಉದ್ಯಮಿಗಳು ಭಾಗವಹಿಸಿದ್ದರು.

# ಕೃಷಿ ಕ್ಷೇತ್ರದ ರಕ್ಷಣೆ ಪ್ರತಿಯೊಬ್ಬರ ಕರ್ತವ್ಯವಾಗಬೇಕು : ಡಾ.ಸಜ್ಜನ

■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಬದಲಾಗುತ್ತಿರುವ ಹವಾಮಾನ, ಹೆಚ್ಚುತ್ತಿರುವ ಕೃಷಿ ವೆಚ್ಚ, ಕುಂಠಿತವಾಗುತ್ತಿರುವ ಉತ್ಪಾದನೆ ಮತ್ತು ಅನಿಶ್ಚಿತವಾಗಿರುವ ಮಾರುಕಟ್ಟೆಯಂತಹ ಜ್ವಲಂತ ಸಮಸ್ಯೆಗಳಿಂದ ಬಸವಳಿದು ಅಸ್ತಿತ್ವ ಕಳೆದುಕೊಳ್ಳುವ ಅಪಾಯದಂಚಿನಲ್ಲಿರುವ ಕೃಷಿ ಕ್ಷೇತ್ರದ ರಕ್ಷಣೆ ಪ್ರತಿಯೊಬ್ಬರ ಕರ್ತವ್ಯವಾಗಬೇಕು ಎಂದು ವಿಜಯಪುರದ ಪ್ರಾದೇಶಿಕ ಕೃಷಿ ಸಂಶೋಧನಾ ಕೇಂದ್ರದ ಮುಖ್ಯಸ್ಥ ಹಾಗೂ ಸಹ ಸಂಶೋಧನಾ ನಿರ್ದೇಶಕ ಡಾ. ಅಶೋಕ ಸಜ್ಜನ ಕರೆ ನೀಡಿದರು.ತಾಲೂಕಿನ ಮಡಿಕೇಶ್ವರ ಗ್ರಾಮದ ಶ್ರೀ ಮಲ್ಲಿಕಾರ್ಜುನ ದೇವಸ್ಥಾನದ ಮಂಗಲ ಭವನದಲ್ಲಿ ಕುಕ್ಕುಟ ಸಹಕಾರಿ ಮಹಾಮಂಡಳ, ಬೆಂಗಳೂರು, ಕೃಷಿ ವಿಜ್ಞಾನ ಕೇಂದ್ರ ವಿಜಯಪುರ, ಪರಪ್ಪ ಮಾಸ್ತರ ಸಾವಯವ ಕೃಷಿ ವಿದ್ಯಾಪೀಠ, ಬಸರಕೋಡ, ಶ್ರೀ ಪರಮಾನಂದ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ಹರನಾಳ ಹಾಗೂ ದಾಸೋಹಿ ಕುಕ್ಕುಟ ರೈತ ಉತ್ಪಾದಕ ಕಂಪನಿ ಇವುಗಳ ಸಂಯುಕ್ತಾಶ್ರಯದಲ್ಲಿ ಅಮೃತ ರೈತ ಉತ್ಪಾದಕ ಸಂಸ್ಥೆಗಳ ಯೋಜನೆ ಅನುದಾನದಲ್ಲಿ ಏರ್ಪಡಿಸಲಾಗಿದ್ದ ಕೋಳಿ ಸಾಕಾಣಿಕೆ, ಕೃಷಿ ಮತ್ತು ತೋಟಗಾರಿಕೆಯಲ್ಲಿ ಆಧುನಿಕತೆಗಳ ಅಳವಡಿಕೆಗಳ ಕುರಿತಾದ ಹೋಬಳಿ ಮಟ್ಟದ ರೈತ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಕೃಷಿ ಸುಸ್ಥಿರತೆಯನ್ನು ಗಮನದಲ್ಲಿಟ್ಟುಕೊಂಡು ತನ್ನ ಸದಸ್ಯ ರೈತರಿಗಾಗಿ ದಾಸೋಹಿ ಕೈಗೊಳ್ಳುತ್ತಿರುವ ಕಾರ್ಯ ಯೋಜನೆಗಳು ಇಡೀ ರಾಜ್ಯಕ್ಕೆ ಮಾದರಿಯಾಗಿವೆ ಎಂದರು. ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ. ಎಸ್.ಎಂ ವಸ್ತ್ರದ ಮಾತನಾಡಿ, ಕಡಿಮೆ ವೆಚ್ಚ – ಅಧಿಕ ಉತ್ಪಾದನೆ ಎಂಬುದನ್ನು ಮಂತ್ರವನ್ನಾಗಿಸಿಕೊಂಡು ಮಣ್ಣು ಆರೋಗ್ಯ, ಬೀಜಗಳ ಆಯ್ಕೆ, ರೋಗ ಮತ್ತು ಕೀಟಗಳ ನಿರ್ವಹಣೆ, ಕೋಯ್ಲೋತ್ತರ ಪದ್ಧತಿ, ಮಾರುಕಟ್ಟೆ ನಿರ್ಧಾರ ಸೇರಿದಂತೆ ಬೆಳೆ ಉತ್ಪಾದನಾ ಚಕ್ರದ ಪ್ರತಿ ಹಂತದಲ್ಲಿ ವೈಜ್ಞಾನಿಕ ತಾಂತ್ರಿಕತೆಗಳನ್ನು ಅಳವಡಿಸಿಕೊಂಡಲ್ಲಿ ರೈತ ಕೃಷಿಯಲ್ಲಿ ಯಶಸ್ಸು ಕಾಣಲು ಸಾಧ್ಯ ಎಂದರು. ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಸುರೇಶ ಭಾವಿಕಟ್ಟಿ ಮಾತನಾಡಿ, ಕೃಷಿಯಲ್ಲಿ ಹೆಚ್ಚುತ್ತಿರುವ ಕೃಷಿ ಯಾಂತ್ರಿಕತೆಗಳ ಅಗತ್ಯತೆಯನ್ನು ಪೂರೈಸಲು ಸರ್ಕಾರ ಜಾರಿ ಮಾಡಿದ ಸಹಾಯಧನ ಆಧಾರಿತ ಯೋಜನೆಗಳ ಪ್ರಯೋಜನ ಪಡೆದು ಅಭಿವೃದ್ಧಿ ಸಾಧಿಸಲು ರೈತರು ಇಲಾಖೆಯ ನೆರವು ಪಡೆಯಬೇಕೆಂದು ಮನವಿ ಮಾಡಿದರು.

ಅಧ್ಯಕ್ಷತೆ ವಹಿಸಿದ್ದ ದಾಸೋಹಿ ಕುಕ್ಕುಟ ರೈತ ಉತ್ಪಾದಕ ಕಂಪನಿಯ ಅಧ್ಯಕ್ಷ ಅರವಿಂದ ಕೊಪ್ಪ ಮಾತನಾಡಿದರು.

ಕೀಟ ಶಾಸ್ತ್ರಜ್ಞ ಡಾ. ಪ್ರಸನ್, ರೇಷ್ಮೆ ಇಲಾಖೆಯ ನಿವೃತ್ತ ಸಹಾಯಕ ನಿರ್ದೇಶಕ ಸಿ.ಆರ್ ಪೋಲೀಸಪಾಟೀಲ, ಸಹಾಯಕ ತೋಟಗಾರಿಕೆ ಅಧಿಕಾರಿ ಮಮತಾ ವಿಷಯ ಮಂಡಿಸಿ ಸಂವಾದ ನಡೆಸಿಕೊಟ್ಟರು. ಪಿ.ಕೆ.ಪಿ.ಎಸ್ ಅಧ್ಯಕ್ಷ ಬಸನಗೌಡ ಪಾಟೀಲ, ಗುತ್ತಿಗೆದಾರ ಸಿ.ಎನ್ ಪಾಟೀಲ, ಎಫ್.ಪಿ.ಓ ನಿರ್ದೇಶಕರಾದ ಬಸವರಾಜ ಕುಂಟೋಜಿ, ಶ್ರೀಶೈಲ ಮೇಟಿ ಉಪಸ್ಥಿತರಿದ್ದರು. ನಿರ್ದೇಶಕ ಸೋಮನಗೌಡ ಬಿರಾದಾರ ಸ್ವಾಗತಿಸಿದರು. ಮಡಿವಾಳಯ್ಯ ಗು. ಹಿರೇಮಠ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

# ಮುದ್ದೇಬಿಹಾಳದಲ್ಲಿ ಭಗವದ್ಗೀತಾ ಅಭಿಯಾನದ ಪ್ರಶಿಕ್ಷಣ ವರ್ಗ

■ ಉದಯರಶ್ಮಿ ದಿನಪತ್ರಿಕೆ




ಮುದ್ದೇಬಿಹಾಳ: ಜ್ಞಾನ ಮತ್ತು ವಿಜ್ಞಾನ ಸಹಿತವಾಗಿರುವ ಭಗವದ್ಗೀತೆ ನಮಗಷ್ಟೆ ಅಲ್ಲದೆ ನಮ್ಮ ಮುಂದಿನ ತಲೆಮಾರಿಗೆ ಬೇಕಾಗಿದೆ ಎಂದು ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ಯೋಜನಾಧಿಕಾರಿ ಪಿ. ನಾಗೇಶ ಹೇಳಿದರು.

ಪಟ್ಟಣದ ಜ್ಞಾನ ಭಾರತಿ ವಿದ್ಯಾ ಮಂದಿರ ಶಾಲೆಯಲ್ಲಿ ಶಿರಸಿ ಸೋಂದಾ ಸ್ವರ್ಣವಲ್ಲೀ ಸಂಸ್ಥಾನ ಯತಿವರೇಣ್ಯರಾದ ಶ್ರೀಮಜ್ಜಗದ್ಗುರು ಶಂಕರಾಚಾರ್ಯ ಶ್ರೀಮದ್ ಗಂಗಾಧರೇಂದ್ರ ಸರಸ್ವತಿ ಮಹಾಸ್ವಾಮಿಗಳು ಆಯೋಜಿಸಿರುವ ಭಗವದ್ಗೀತಾ ಅಭಿಯಾನವನ್ನು ಸಂಘಟಿಸುವ ಉದ್ದೇಶದಿಮದ ಹಮ್ಮಿಕೊಳ್ಳಲಾದ ಪ್ರಶಿಕ್ಷಣ ವರ್ಗದಲ್ಲಿ ಅವರು ಮಾತನಾಡಿದರು. ಜ್ಞಾನವಿದ್ದಲ್ಲಿ ವಿಜ್ಞಾನವನ್ನು ವಿಶ್ಲೇಷಣೆ ಮಾಡಬಹುದಾಗಿದೆ. ವಿಜ್ಞಾನವನ್ನು ಅಧ್ಯಯನ ಮಾಡಬೇಕಾದರೆ ಜ್ಞಾನದ ಅರಿವು ಇರಬೇಕಾಗುತ್ತದೆ. ಅಂತಹ ಜ್ಞಾನ, ವಿಜ್ಞಾನ, ಮನೋವಿಜ್ಞಾನ ಅಲ್ಲದೆ ಸರ್ವಜ್ಞಾನ ಸದೃಶ ಗ್ರಂಥ ಭಗವದ್ಗೀತೆಯಾಗಿದೆ. ಆದುದರಿಂದ ಇದನ್ನು ಅಭ್ಯಸಿಸಿ ಅನ್ವಯಿಸಿಕೊಳ್ಳಲೇಬೇಕಾಗಿದೆ. ಈ ರೀತಿ ಪ್ರಶಿಕ್ಷಣ ವರ್ಗಕ್ಕೆ ಬರುವಾಗ ನಾವು ನಮ್ಮ ಮಕ್ಕಳನ್ನ, ಮನೆಯ ಸದದ್ಯರುಗಳನ್ನ, ಪರಿಚಿತರೊಂದಿಗೆ ಜೊತೆಗೂಡಿ ಬಂದಲ್ಲಿ ಅನೂಕೂಲವಾಗುತ್ತದೆ. ಅಲ್ಲದೆ ನಮ್ಮ ಭಾರತೀಯ ಸಂಸ್ಕೃತಿಯಲ್ಲಿ ಅಡಗಿರುವ ಜ್ಞಾನ ನಿರಂತರವಾಗಿ ಹರಿಯಲು ಸಾಧ್ಯವಾಗುತ್ತದೆ ಎಂದರು. ಅಭಿಯಾನ ಸಮಿತಿಯ ಪ್ರಧಾನ ಕಾರ್ಯದರ್ಶಿ ಪ್ರೀತಿ ದೇಗಿನಾಳ, ಅಭಿಯಾನ ಸಮಿತಿಯ ಅಧ್ಯಕ್ಷ ಶ್ರೀಶೈಲ್ ದೊಡಮನಿ ಮಾತನಾಡಿದರು. ಶಿಕ್ಷಕಿ ರಂಜಿತಾ ಹೆಗಡೆ ಭಗವದ್ಗೀತೆಯ 9ನೇ ಅಧ್ಯಾಯದ ಪ್ರಶಿಕ್ಷಣ ನಡೆಸಿಕೊಟ್ಟರು. ಈ ವೇಳೆ ಉಪಾಧ್ಯಕ್ಷ ಎ.ಆರ್.ಪಾಟೀಲ್, ಶ್ರೀಹರಿ ಅಂಗಡಿ, ಸರಸ್ವತಿ ಮಡಿವಾಳರ, ಶರಣು ಗಂಗನ ಗೌಡರ್, ಶೀವಲೀಲಾ ಕವಡಿಮಟ್ಟಿ, ರೇಖಾ ಕೊಂಡಗೂಳಿ, ನಿರ್ಮಲಾ ಗುರವ್ವ, ಲಲಿತಾ ಇಳಕಲ್, ಸರಸ್ವತಿ ಪೀರಾಪೂರ ಸುಮಾ ಅಂಗಡಿ, ದೇವಮ್ಮ ಪಾಟೀಲ್, ಸುರೇಖಾ ಕಿಲ್ಲಾರಟ್ಟಿ, ಬಸಮ್ಮ ಡಂಬಾಳ, ರೇಖಾ ವಾಲಿ, ರೇಣುಕ ಗಂಗನ ಗೌಡರ್,ಗಂಗಮ್ಮ ಚೌದರಿ ಲಕ್ಮೀ ಪವಾರ, ರಶ್ಮಿ ತೇಲಂಗಿ, ಗಂಗಮ್ಮ ಟಿ, ಸೇರಿದಂತೆ ಮತ್ತೀತರರು ಇದ್ದರು. ಸಮಿತಿಯ ಉಪಾಧ್ಯಕ್ಷೆ ಸಂಗಮ್ಮ ದೇವರಳ್ಳಿ ಪ್ರಾಸ್ತಾವಿಕದೊಂದಿಗೆ ಸ್ವಾಗತಿಸಿದರು. ಸಂಚಾಲಕ ರಾಮಚಂದ್ರ ಹೆಗಡೆ ಅಭಿಯಾನದ ಕಾರ್ಯವೈಖರಿಯ ವಿಸ್ತೃತ ಮಾಹಿತಿ ನೀಡಿದರು. ಪ್ರಶಿಕ್ಷಕ ಮಂಜುನಾಥ ಪಡದಾಳಿ ನಿರೂಪಿಸಿದರು. ಪ್ರಭುಲಿಂಗ ನಂದೆಪ್ಪನವರ ವಂದಿಸಿದರು.

# ಸಚಿವ ಎಂ.ಬಿ.ಪಾಟೀಲರಿಂದ ಶಿಕ್ಷಣ–ಆರೋಗ್ಯ–ಉದ್ಯೋಗ ಸೃಷ್ಟಿಗೆ ಒತ್ತು

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಲ, ವೃಕ್ಷ, ಶಿಕ್ಷಣ, ಆರೋಗ್ಯ ಹಾಗೂ ಉದ್ಯೋಗ ಪಂಚ ತತ್ವಗಳಡಿ ಸರ್ವಾಂಗೀಣ ಅಭಿವೃದ್ಧಿಗೆ ಸಚಿವ ಎಂ.ಬಿ.ಪಾಟೀಲ ಶ್ರಮಿಸುತ್ತಿದ್ದಾರೆ ಎಂದು ಬಿ.ಎಲ್.ಡಿ.ಇ ಸಂಸ್ಥೆ ಆಡಳಿತಾಧಿಕಾರಿ ಐ.ಎಸ್. ಕಾಳಪ್ಪನವರ ಹೇಳಿದ್ದಾರೆ. ಸೋಮವಾರ ಸಂಸ್ಥೆಯ ಶ್ರೀಮತಿ ಬಂಗಾರಮ್ಮ ಸಜ್ಜನ ಮಹಿಳಾ ಮಹಾವಿದ್ಯಾಲಯದ ಆವರಣದಲ್ಲಿ ಸಚಿವ ಎಂ.ಬಿ.ಪಾಟೀಲರ ಜನ್ಮದಿನದ ಅಂಗವಾಗಿ ಸಸಿ ನೆಡುವ ಮತ್ತು ಸಸಿ ವಿತರಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಜಲಕ್ರಾಂತಿಯ ಮೂಲಕ ಅರಣ್ಯೀಕರಣಕ್ಕೂ ಮುನ್ನುಡಿ ಬರೆದಿರುವ ಸಚಿವರು, ಶಿಕ್ಷಣ, ಆರೋಗ್ಯ ಹಾಗೂ ಉದ್ಯೋಗ ಸೃಷ್ಟಿಗೆ ಒತ್ತು ನೀಡಿದ್ದಾರೆ. ಅಲ್ಲದೇ, ರಾಜ್ಯದಲ್ಲಿ ಕೈಗಾರಿಕೆ ಕ್ರಾಂತಿಯ ಕಡೆಗೆ ದೃಷ್ಟಿಯನ್ನು ಕೇಂದ್ರೀಕರಿಸಿದ್ದಾರೆ ಎಂದು ಹೇಳಿದರು. ಕಾಲೇಜಿನ ಪ್ರಾಚಾರ್ಯ ಡಾ. ವೈ. ತಮ್ಮಣ್ಣ ಪ್ರಾಸ್ತಾವಿಕವಾಗಿ ಮಾತನಾಡಿದರು. ಜೆ.ಎಸ್.ಎಸ್. ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಬಿ. ವೈ. ಖಾಸನಿಸ್, ಎಸ್.ಎಸ್.ಹೈಸ್ಕೂಲ್ ಬ ಶಾಲೆಯ ಪ್ರಾಚಾರ್ಯ ವೀರಣ್ಣ ಪಾಟೀಲ, ಸಿಪಿಇಡಿ ಕಾಲೇಜಿನ ಪ್ರಾಚಾರ್ಯ ಮಲ್ಲನಗೌಡ ಕುಪ್ಪಿ, ಬಾಲಕಿಯರ ಪ್ರೌಢ ಶಾಲೆ ಮುಖ್ಯಾಧ್ಯಾಪಕಿ ವಿ.ಪಿ.ನಿಡೋಣಿ, ಸಮನ್ವಯ ಶಾಲೆ ಮುಖ್ಯೋಪಾಧ್ಯಾಯ ಸಿದ್ದು ಬಿರಾದಾರ, ಸಿ. ಟಿ. ಕಂದಗಲ್, ಡಾ. ಆರ್. ಜಿ. ಕಮತರ, ಮಲ್ಲಿಕಾರ್ಜುನ ಕೆಂಗನಾಳ, ಡಾ. ಭಕ್ತಿ ಮಹೇಂದ್ರಕರ, ಜ್ಯೋತಿ ಬಿರಾದಾರ, ವಿದ್ಯಾ ಬಿರಾದಾರ, ವಾಣಿಶ್ರೀ ಮಠ, ಕುಲಕರ್ಣಿ, ಅಮರೇಶ ಸಾಲಕ್ಕಿ, ರಮೇಶ ಮಾಲಕ, ಅರಣಾ ಮಹಾಲಿಂಗಪುರ, ಡಿ. ಆರ್ ಖಾನಾಪುರ, ಎಸ್. ಎಂ ನಾಯ್ಕೊಡಿ, ಎಸ್. ಬಿ. ಪಾಟೀಲ ಉಪಸ್ಥಿತರಿದ್ದರು.

# ವಿಜಯದಶಮಿ ಉತ್ಸವ: ಆಕರ್ಷಕ ಪಥಸಂಚಲನ

ಗುಳೇದಗುಡ್ಡ : ವಿಜಯದಶಮಿ ಉತ್ಸವದ ಅಂಗವಾಗಿ ನಗರದಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘದದಿಂದ ಘಣವೇಷಧಾರಿ ಸ್ವಯಂಸೇವಕರ ಆಕರ್ಷಕ ಪಥಸಂಚಲನ ನಡೆಯಿತು. ನಗರದ ಭಂಡಾರಿ ಹಾಗೂ ರಾಠಿ ಮಹಾವಿದ್ಯಾಲಯದಿಂದ ಮಧ್ಯಾಹ್ನ ಆರಂಭಗೊಂಡ ಪಥಸಂಚಲನ ನಗರದ ಕೆಳಗಿನ ಮಾರ್ಕೆಟ್, ಹರದೊಳ್ಳಿ, ಸಾಲೇಶ್ವರ ದೇವಸ್ಥಾನ, ಪವಾರ ಕ್ರಾಸ್, ಪುರಸಭೆ, ಕಂಠಿಪೇಟೆ, ಗಚ್ಚಿನಕಟ್ಟಿ, ಚೌಬಜಾರ, ಅರಳಿಕಟ್ಟಿ, ಗುಗ್ಗರಿ ಪೇಟೆಯ ಮೂಲಕ ಹಾಯ್ದು ಭಂಡಾರಿ ಕಾಲೇಜು ಮೈದಾನ ತಲುಪಿತು. ಪಥಸಂಚಲನದಲ್ಲಿ ನಗರದ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಅಗಮಿಸಿದ ಗಣವೇಷಧಾರಿ ಸ್ವಯಂಸೇವಕರು, ಘೋಷ ಸಹಿತ ಸಂಚಲನದಲ್ಲಿ ಭಾಗವಹಿಸಿದ್ದರು. ದಾರಿಯುದ್ದಕ್ಕೂ ಸೇರಿದ ಮಹಿಳೆಯರು, ಮಕ್ಕಳು ಹರ್ಷೋದ್ಗಾರದಿಂದ ಪಥಸಂಚಲವನ್ನು ಸ್ವಾಗತಿಸಿದರು.

ಎಲ್ಲೆಲ್ಲೂ ಕೇಸರಿಮಯ: ಪಥಸಂಚಲ ಸಾಗುವ ದಾರಿಗುಂಟ ನಗರದ ಕಟ್ಟಡಗಳ ಮೇಲೆ ಭಗವಾಧ್ವಜಗಳು ರಾರಾಜಿಸುತ್ತಿದ್ದವು. ಸಾರ್ವಜನಿಕರು ರಸ್ತೆಗಳಲ್ಲಿ ರಂಗೋಲಿ, ಹೂವಿನ ಅಲಂಕಾರ ಮಾಡಿ ಪಥ ಸಂಚಲನವನ್ನು ಸ್ವಾಗತಿಸಿದರು. ಸ್ವಯಂ ಸೇವಕರ ಮೇಲೆ ಹೂಮಳೆಗರೆದು ಹರ್ಷವ್ಯಕ್ತಪಡಿಸಿದರು. ಅಲ್ಲಲ್ಲಿ ವೀರಪುಲಕೇಶಿ, ವೀರಸಾರ್ವಕರ, ಭಗತ್ ಸಿಂಗ, ಪ್ರಮೋದ ಮುತಾಲಿಕ, ಸರದಾರ ವಲ್ಲಭಾಯಿ ಪಟೇಲ, ಶಿವಾಜಿ, ಮಹಾರಾಣಾ ಪ್ರತಾಪಸಿಂಗ್, ಡಾ. ಅಂಬೇಡ್ಕರ ಅವರ ಭಾವಚಿತ್ರಗಳನ್ನು ಅಳವಡಿಸಲಾಗಿತ್ತು. ಮುಖ್ಯರಸ್ತೆಯಲ್ಲಿ ಶ್ರೀರಾಮ, ಶಿವಾಜಿ, ಗೋವುಹಾಗೂ ಕರು, ಭಾರತಮಾತೆಯ ಮೂರ್ತಿಗಳನ್ನು ಪ್ರತಿಷ್ಠಾಪನೆ ಮಾಡಲಾಗಿತ್ತು. ಶಿವಾಜಿ, ಸುಭಾಷಚಂದ್ರ ಭೋಸ್, ವಿವೇಕಾನಂದ, ಝಾನ್ಸಿರಾಣಿ ಲಕ್ಷ್ಮೀಬಾಯಿ, ಒನಕೆ ಓಬವ್ವ, ಭಗತ್‌ಸಿಂಗ್, ಶ್ರೀರಾಮ, ಕಿತ್ತೂರುರಾಣಿ ಚೆನ್ನಮ್ಮ ಸೇರಿದಂತೆ ವಿವಿಧ ರಾಷ್ಟ್ರನಾಯಕರ ವೇಷಧಾರಿ ಮಕ್ಕಳು ಪಥ ಸಂಚಲನವನ್ನು ಸ್ವಾಗತಿಸಿದರು. ಪಥಸಂಚಲನದಲ್ಲಿ ಬಸವರಾಜ ಕುಂಬಾರ, ವಿವೇಕಾನಂದ ದೇವಾಂಗಮಠ, ಸ್ವಯಂಸೇವಕರು ಭಾಗವಹಿಸಿದ್ದರು.

# ಶ್ರೀ ಭವಾನಿ ದೇವಸ್ಥಾನದಲ್ಲಿ ಶರನ್ನವರಾತ್ರಿ ವಿಶೇಷ ಪೂಜೆ

■ ಉದಯರಶ್ಮಿ ದಿನಪತ್ರಿಕೆ



ಕಲಕೇರಿ: ಗ್ರಾಮದ ಶ್ರೀ ಭವಾನಿ ದೇವಸ್ಥಾನದಲ್ಲಿ ಶರನ್ನವರಾತ್ರಿಯ ಪ್ರಯುಕ್ತ ಶ್ರೀ ದೇವಿಯ ಮೂರ್ತಿಗೆ ವಿಶೇಷ ಪೂಜೆಯನ್ನು ಹಮ್ಮಿಕೊಳ್ಳಲಾಯಿತು.

ಇದೇ ವೇಳೆ ದೇವಸ್ಥಾನದ ಕಮೀಟಿ ಮತ್ತು ದೇವಿ ಉಪಾಸಕರಾದ ಮೋತಿಲಾಲ ಕುಲಕರ್ಣಿ ಅವರ ಸಂಕಲ್ಪದಂತೆ 1001 ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮದಲ್ಲಿ ಹಿರೂರ ಹಿರೇಮಠದ ಜಯಸಿದ್ಧೇಶ್ವರ ಶಿವಾಚಾರ್ಯರ ಸಮ್ಮುಖದಲ್ಲಿ ಸುಮಂಗಲೆಯರಿಗೆ ಉಡಿ ತುಂಬುವ ಕಾರ್ಯಕ್ಕೆ ಚಾಲನೆ ನೀಡಲಾಯಿತು ಮತ್ತು ಸುಮಂಗಲೆಯರಿಗೆ ವಿಶೇಷವಾದ ಪ್ರಸಾದದ ವ್ಯವಸ್ಥೆ ಮಾಡಲಾಯಿತು.

# ಅ.11 ರಂದು ಶಾಸಕ ನಾಡಗೌಡ ಜನ್ಮದಿನ: ವಿವಿಧ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಶಾಸಕ ಹಾಗೂ ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜಂಟ್‌ನ ಅಧ್ಯಕ್ಷ ಸಿ.ಎಸ್.ನಾಡಗೌಡ ಅಪ್ಪಾಜಿಯವರ 67ನೇ ಜನ್ಮದಿನದ ಪ್ರಯುಕ್ತ ಅವರ ಅಭಿಮಾನಿಗಳು, ಕಾಂಗ್ರೆಸ್ ಪಕ್ಷದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಅ.11 ರಂದು ಪಟ್ಟಣದಲ್ಲಿ ವಿವಿಧ ಕಾರ್ಯಗಳನ್ನು ಹಮ್ಮಿಕೊಂಡಿದ್ದಾರೆ.

ಬೆಳಿಗ್ಗೆ 10 ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿನ ಬಡ ರೋಗಿಗಳಿಗೆ ಹಣ್ಣು ಹಂಪಲ ವಿತರಣೆ, 11ಕ್ಕೆ ಪಟ್ಟಣದ ಬಸ್ ನಿಲ್ದಾಣದ ಎದುರಿನ ಪಿಎಲ್‌ಡಿ ಬ್ಯಾಂಕ್ ಆವರಣದಲ್ಲಿ ರಕ್ತದಾನ ಶಿಬಿರ ಹಾಗೂ ಉಚಿತ ಕಣ್ಣು ತಪಾಸಣೆ, ಮಧ್ಯಾಹ್ನ 12ಕ್ಕೆ ನಿರ್ಗತಿಕರಿಗೆ ಹಾಸಿಗೆ ಕಿಟ್ ವಿತರಣೆ ಸಂಜೆ 6ಕ್ಕೆ ಪಟ್ಟಣದ ಹುಡಕೋ ಕಾಲೋನಿಯ ಗ್ರಾಮದೇವತೆ ಕುಸ್ತಿ ಮೈದಾನದಲ್ಲಿ ಹುಟ್ಟು ಹಬ್ಬಕ್ಕೆ ಶುಭಕೋರುವ ಕಾರ್ಯಕ್ರಮ ಜರುಗಲಿದೆ. ಈ ಕಾರ್ಯಕ್ರಮದ ಸಾನಿಧ್ಯವನ್ನು ಇಂಗಳೇಶ್ವರದ ಚನ್ನಬಸವ ಮಹಾಸ್ವಾಮಿಗಳು, ಕುಂಟೋಜಿ ಸಂಸ್ಥಾನ ಹಿರೇಮಠದ ಡಾ.ಚನ್ನವೀರ ಶಿವಾಚಾರ್ಯರು, ತಾಳಿಕೋಟೆಯ ಖಾಸ್ಗತೇಶ್ವರಮಠದ ಬಾಲ ಶಿವಯೋಗಿ ಸಿದ್ಧಲಿಂಗದೇವರು ವಹಿಸುವರು.

'ವೀಣಾಂತರಂಗ'

# ಮಕ್ಕಳಲ್ಲಿ ಎ ಡಿ ಹೆಚ್ ಡಿ ತೊಂದರೆ, ಸವಾಲುಗಳು ಮತ್ತು ನಿರ್ವಹಣೆ

■ ಉದಯರಶ್ಮಿ ದಿನಪತ್ರಿಕೆ


ಯಶಸ್ ಮೂರು ವರ್ಷದ ಪುಟ್ಟ ಮಗುವಾಗಿದ್ದಾಗ ಆತನನ್ನು ಹಿಡಿಯುವುದು ಆತನ ತಾಯಿ ತಂದೆಯರಿಗೆ ಅತಿ ದೊಡ್ಡ ಸವಾಲಾಗಿತ್ತು. ಸಾಮಾನ್ಯವಾಗಿ ಚುರುಕಾಗಿರುವ ಮಕ್ಕಳಿಗೆ ಹೋಲಿಸಿದರೆ ಈತನದ್ದು ತುಸು ಅತಿರೇಕವೇ ಎನ್ನಿಸುವಂತಹ ವರ್ತನೆ. ಮನೆಗೆ ಯಾರಾದರೂ ಅತಿಥಿಗಳು ಬಂದರೆ ತುಸು ಹೆಚ್ಚೇ ಉದ್ವೇಗಕ್ಕೆ ಒಳಗಾಗುತ್ತಿದ್ದ ಆತ ಮನೆಯ ಎಲ್ಲ ಸಾಮಾನುಗಳನ್ನು ಕಿತ್ತು ಹಾಕುತ್ತಿದ್ದ. ಒಂದೇ ಒಂದು ಕ್ಷಣವೂ ಆತನನ್ನು ಸುಮ್ಮನಿರಿಸಲು ಸಾಧ್ಯವಾಗುತ್ತಿರಲಿಲ್ಲ ಆತನ ಪಾಲಕರಿಗೆ.

ಮೂರು ವರ್ಷದವನಾದ ಯಶಸ್ ನನ್ನು ಪ್ಲೇ ಹೋಮ್ ಗೆ ಕಳಿಸೋಣವೆಂದು ಯೋಚಿಸಿದ ಪಾಲಕರು ಆತನನ್ನು ಪ್ಲೇ ಹೋಂಗೆ ದಾಖಲು ಮಾಡಿದರೆ ಅಲ್ಲಿಯೂ ಕೂಡ ಆತನನ್ನು ಒಂದೆಡೆ ಕೂಡಿಸಲು ಸಾಧ್ಯವಾಗದೆ ಕೈ ಚೆಲ್ಲುತ್ತಿದ್ದರು ಶಿಕ್ಷಕರು. ಉಳಿದ ಮಕ್ಕಳಿಗೆ ತೊಂದರೆ ಮಾಡದಿದ್ದರೂ ಆಟದ ಸಾಮಾನುಗಳನ್ನು ಕಿತ್ತುವ, ಕೆಡವುವ, ಸರಿದಾಡಿಸುವ ಆಟದ ಜಾರು ಬಂಡೆಯ ನಟ್ಟು ಬೋಲ್ಟ್ ಗಳನ್ನು ಬಿಚ್ಚುವ ಆತನ ಕೃತ್ಯ ಗಳಿಂದ ಆತನನ್ನು ಹಿಡಿಯುವುದರಲ್ಲಿ ಅಲ್ಲಿನ ಸಿಬ್ಬಂದಿಗೆ ಸಾಕಾಗಿ ಹೋಗುತ್ತಿತ್ತು.

ಮುದ್ದು ಮೊಗದ ಬೊಗಸೆ ಕಂಗಳ ಆ ಬಾಲಕನನ್ನು ಬಯ್ಯಲಾಗದ, ಶಿಕ್ಷಿಸಲೂ ಆಗದ ಪರಿಸ್ಥಿತಿ ಎಲ್ಲರದಾಗಿತ್ತು. ತಿಳಿಸಿ ಹೇಳಿದರೆ ಅರಿತುಕೊಳ್ಳಲಾಗದ ಮಗುವಿನ ಚಟುವಟಿಕೆಯ ವೈಪರೀತ್ಯತೆ ಪಾಲಕರನ್ನು ಕಂಗಾಲಾಗಿಸಿತ್ತು ಎಂದರೆ ತಪ್ಪಿಲ್ಲ.

ಕೊನೆಗೆ ಆಪ್ತರ ಸಲಹೆಯ ಮೇರೆಗೆ ವೈದ್ಯರಿಗೆ ತೋರಿಸಿದಾಗ ಅರಿವಾಗಿದ್ದು ಆ ಮಗುವಿಗೆ ಎ ಡಿ ಎಚ್ ಡಿ ತೊಂದರೆ ಇದೆ ಎಂದು.





ಏನಿದು ಎ ಡಿ ಎಚ್ ಡಿ ಎಂದಿರಾ??

"ಅಟೆನ್ಷನ್ ಡೆಫಿಸಿಟ್ ಹೈಪರ್ ಆಕ್ಟಿವಿಟಿ ಡಿರ್ಡರ್" ಎಂದು ಹೆಸರೇ ಹೇಳುವಂತೆ ಇದೊಂದು ಅತಿಯಾದ ಗಮನದ ಕೊರತೆಯನ್ನು ಹೊಂದಿರುವ ಉದ್ವೇಗಕ್ಕೊಳಗಾಗುವ, ಚಂಚಲ ಚಿತ್ತವನ್ನು ಹೊಂದಿರುವ, ಯಾವ ಮಾತನ್ನು ಕೇಳಿಸಿಕೊಳ್ಳದಿರುವ ಒಂದು ಸಂಕೀರ್ಣ ಸ್ಥಿತಿಯಾಗಿದ್ದು ವೈದ್ಯಕೀಯ ವಿಜ್ಞಾನದ ಪರಿಭಾಷೆಯಲ್ಲಿ ಹೇಳುವುದಾದರೆ ಮೆದುಳಿನ ಸಾಮರ್ಥ್ಯವನ್ನು ಕುಗ್ಗಿಸುವ ನರ ವೈಜ್ಞಾನಿಕ ಸಮಸ್ಯೆಯಾಗಿದೆ.

ಎ ಡಿ ಹೆಚ್ ಡಿ ತೊಂದರೆಯು ವಂಶ ಪಾರಂಪರ್ಯ ವಾಗಿ ಕೂಡ ಬರಬಹುದಾದ ತೊಂದರೆಯಾಗಿದ್ದು ಪಾಲಕರಲ್ಲಿ ಈ ತೊಂದರೆ ಇದ್ದರೆ ಅವರ ಮಕ್ಕಳಲ್ಲಿ ತೊಂದರೆ ಕಾಣಿಸಿಕೊಳ್ಳುವ ಶೇಕಡ 50ರಷ್ಟು ಸಾಧ್ಯತೆಗಳು ಇರುತ್ತವೆ.

ಇದನ್ನು ಹೆಚ್ಚಾಗಿ ನಾವು ಮಕ್ಕಳಲ್ಲಿ ಕಾಣಬಹುದು. ಈ ಕಾಯಿಲೆಯನ್ನು ಗುಣಪಡಿಸಲು ಸಾಧ್ಯವೇ? ಎಂದರೆ ಕೇಳಿ ಬರುವ ಬಹುತೇಕ ಉತ್ತರ ಇಲ್ಲ ಎಂದು. ತೀವ್ರತರವಾದ ಈ ತೊಂದರೆಯಿಂದ ಬಳಲುತ್ತಿರುವ ಮಕ್ಕಳನ್ನು ಒಂದು ಹಂತದವರೆಗೆ ಮಾತ್ರ ಸಾಮಾಜಿಕ ಬದುಕು ನಿರ್ವಹಿಸಲು ಸಾಧ್ಯವಾಗುವಷ್ಟು ಪ್ರಯತ್ನ ಮಾಡಬಹುದೇ ಹೊರತು ಸಂಪೂರ್ಣ ಗುಣಮುಖವಾಗುತ್ತದೆ ಎಂಬ ಭರವಸೆಯನ್ನು ಕೊಡಲು ಸಾಧ್ಯವಿಲ್ಲ.

ಎಡಿ ಎಚ್ ಡಿ ತೊಂದರೆ ಇರುವ ಮಕ್ಕಳಲ್ಲಿ ನರವ್ಯೂಹಗಳ ಸಂರಚನೆ ಸರಿಯಾಗಿ ಆಗಿರುವುದಿಲ್ಲ.

ಮೆದುಳಿನ ವಾಹಕಗಳು ಕಗ್ಗಂಟಾಗಿದ್ದು ಯಾವುದೇ ರೀತಿಯ ಮಾಹಿತಿಗಳು ಮೆದುಳಿನಿಂದ ದೇಹದ ಉಳಿದ ಭಾಗಗಳಿಗೆ ಸರಳವಾಗಿ ಸಾಗುವುದಿಲ್ಲ. ಇಂತಹ ಮಕ್ಕಳಲ್ಲಿ ಯೋಚಿಸುವ ಮತ್ತು ಯೋಜಿಸುವ ಕ್ರಿಯಾಶೀಲತೆ ಕಡಿಮೆ.

ಎ ಡಿ ಎಚ್ ಡಿ ಇಂದ ಬಳಲುವ ಮಕ್ಕಳು ಅನುಭವಿಸುವ ತೊಂದರೆಗಳು ಹೀಗಿವೆ.

* ಕೆಲವೇ ಕ್ಷಣಗಳ ಹಿಂದೆ ನೀವು ಹೇಳಿದ ವಿಷಯಗಳನ್ನು ಆ ಮಕ್ಕಳು ಮರೆತು ಮತ್ತೆ ತಮ್ಮದೇ ರೀತಿಯಲ್ಲಿ ವ್ಯವಹರಿಸುತ್ತಾರೆ.
* ಮಕ್ಕಳು ವಿಪರೀತ ಮಾತನಾಡುತ್ತಾರೆ ಮತ್ತು ಎಷ್ಟೋ ಬಾರಿ ಅವರ ಮಾತುಗಳು ಅಸಂಬದ್ಧತೆಯಿಂದ ಕೂಡಿರುತ್ತವೆ.
* ಮಕ್ಕಳು ಅತಿಯಾದ ಚಟುವಟಿಕೆಯಿಂದ ಕೂಡಿರುತ್ತಾರೆ
* ವಸ್ತುಗಳನ್ನು ಎಸೆಯುವ, ಹೊಡೆಯುವ ಬಡಿಯುವ, ಬೀಳುವೆನೆಂಬ ಭಯವು ಇಲ್ಲದೆ ಹಾರಾಡುವ, ಜಿಗಿದಾಡುವ, ಕೆಲವೊಮ್ಮೆ ಪ್ರಾಣಕ್ಕೆ ಸಂಚಕಾರ ತರುವ ರೀತಿಯಲ್ಲಿ ಈ ಮಕ್ಕಳು ವರ್ತಿಸುತ್ತವೆ.
* ವಸ್ತುಗಳನ್ನು ಎಲ್ಲೆಂದರಲ್ಲಿ ಎಸೆಯುವುದು, ಕಿತ್ತುವುದು, ಹರಿಯುವುದು ಸದಾ ಒಂದಿಲ್ಲೊಂದು ಕೀಟಲೆಯಲ್ಲಿ ತೊಡಗಿಕೊಂಡಿರುತ್ತಾರೆ.
* ಯಾರೊಂದಿಗೂ ಸ್ನೇಹಿತರಾಗಲು ಇಷ್ಟಪಡದ ಇವರು ಯಾರ

■ ವೀಣಾ ಹೇಮಂತ್ ಗೌಡ ಪಾಟೀಲ್
ಮುಂಡರಗಿ – ಗದಗ್

ಜೊತೆಗೂ ನೇರವಾಗಿ ಕಣ್ಣು ಸೇರಿಸಿ ಮಾತನಾಡಲು ಇಚ್ಚಿಸುವುದಿಲ್ಲ.


* ಮತ್ತೆ ಕೆಲವರು ಸದಾ ಹಗಲುಗನಸು ಕಾಣುವುದರಲ್ಲಿಯೇ ಇರುತ್ತಾರೆ.
* ವಿಷಯವನ್ನು ಅರಿತುಕೊಳ್ಳುವಲ್ಲಿ ತೊಂದರೆಯನ್ನು ಅನುಭವಿಸುವ ಮಕ್ಕಳು, ಕೈ ಬಾಯ್ಗಳ ಚಲನೆ ಮತ್ತು ಮಾತುಗಳಲ್ಲಿ ಸಮತೋಲನ ಇರುವುದಿಲ್ಲ.

ಮೇಲ್ಕಂಡ ತೊಂದರೆಗಳಿಗೆ ತಜ್ಞವೈದ್ಯರೊಂದಿಗೆ ಸಮಾಲೋಚನೆ ಮತ್ತು ಔಷಧೀಯ ಚಿಕಿತ್ಸೆ ಇರುವುದು ನಿಜವಾದರೂ ಈ ತೊಂದರೆ ಸಂಪೂರ್ಣವಾಗಿ ಗುಣಮುಖವಾಗುವುದಿಲ್ಲ. ಹಾಗೆಂದು ವೈದ್ಯರಿಗೆ ತೋರಿಸದೆ, ಚಿಕಿತ್ಸೆ ಪಡೆಯದೆ ಹೋದರೆ ಈ ತೊಂದರೆ ಹೆಚ್ಚಾಗುವ ಸಾಧ್ಯತೆ ಬಹಳ. ಇಂತಹ ತೊಂದರೆಗೆ ವೈದ್ಯಕೀಯ ಸಮಾಲೋಚನೆ, ಆಪ್ತ ಸಲಹೆ ಮತ್ತು ಪಾಲಕರ ಅತೀವ ಸಹನ ಶಕ್ತಿ ಮಗುವಿನ ಮಾನಸಿಕ ಬೆಳವಣಿಗೆಯಲ್ಲಿ ಕೊಂಚ ಸುಧಾರಣೆಯನ್ನು ತರಬಹುದು.

* ಪಾಲಕರು ಮಕ್ಕಳು ಅನುಭವಿಸುವ ಈ ತೊಂದರೆಯನ್ನು ನಿರ್ಲಕ್ಷಿಸಿದಾಗ ಮಕ್ಕಳು ಶಾಲಾ ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ಮತ್ತಷ್ಟು ಹಿಂದುಳಿಯುತ್ತಾರೆ.
* ಸಾಮಾಜಿಕವಾಗಿ ಸಾರ್ವಜನಿಕವಾಗಿ ಜನರೊಂದಿಗೆ ಬೆರೆಯಲು ಸಾಧ್ಯವಾಗುವುದಿಲ್ಲ.
* ಮಗುವಿನ ಸ್ವಾಭಿಮಾನಕ್ಕೆ ಧಕ್ಕೆ ಉಂಟಾಗುತ್ತದೆ ಮತ್ತು ಮಗು ಆತ್ಮವಿಶ್ವಾಸವನ್ನು ಕಳೆದುಕೊಂಡು ಕೀಳರಿಮೆಯಿಂದ ಬಳಲುತ್ತದೆ.
* ಮಗುವಿನ ವರ್ತನೆಯಲ್ಲಿ ದೋಷಗಳು ಕಂಡುಬರುತ್ತವೆ.
* ಭಾವನಾತ್ಮಕವಾಗಿ ಕಂಗೆಡುವ ಮಕ್ಕಳ ಆತ್ಮಸ್ಥೈರ್ಯ ಕುಸಿಯುತ್ತದೆ. ಪರಿಣಾಮವಾಗಿ ಮಕ್ಕಳು ಅಕೃತ್ಯಗಳಲ್ಲಿ ತೊಡಗುವ ಸಾಧ್ಯತೆಗಳು ಹೆಚ್ಚಾಗುತ್ತದೆ.

ತಮ್ಮೆಲ್ಲ ತೊಂದರೆಗಳಿಗೂ ಪಾಲಕರು ಶಿಕ್ಷಕರು ಮತ್ತು ಸಮಾಜವನ್ನು ಹೊಣೆಯಾಗಿಸುವ ಮಕ್ಕಳಿಗೆ ಸೂಕ್ತ ಚಿಕಿತ್ಸೆ ಮತ್ತು ಆಪ್ತ ಸಮಾಲೋಚನೆ ದೊರೆಯದೆ ಹೋದಲ್ಲಿ ತೊಂದರೆಯಾಗುವುದು ಖಂಡಿತ.

ಎ ಡಿ ಎಚ್ ಡಿ ಇರುವ ಎಲ್ಲ ಮಕ್ಕಳ ತೊಂದರೆಗಳು ಒಂದೇ ರೀತಿ ಇರುವುದಿಲ್ಲ. ಯಾವುದೇ ಕೆಲಸ ಕಾರ್ಯಗಳಲ್ಲಿ ನಿರಂತರವಾಗಿ ತೊಡಗಿಕೊಳ್ಳುವುದು ಇವರಿಂದ ಸಾಧ್ಯವಿಲ್ಲ. ಇಂತಹ ಮಕ್ಕಳು ವ್ಯವಹಾರಿಕ ಜಗತ್ತಿನಿಂದ ದೂರವಾಗಿರುತ್ತಾರೆ. ಸಾಮಾಜಿಕ ನೀತಿ ನಿಯಮಗಳು, ಶಿಸ್ತು, ಪ್ರಜ್ಞೆ ಇವರಲ್ಲಿ ಬಹಳಷ್ಟು ಕಡಿಮೆ. ಆದರೆ ಭಾವನಾತ್ಮಕವಾಗಿ ತುಂಬಾ ಸೂಕ್ಷ್ಮ ಮನಸ್ಥಿತಿ ಇವರದಾಗಿದ್ದು ನಿರ್ಲಕ್ಷಿಸಿದಾಗ ನಕಾರಾತ್ಮಕ ಪರಿಣಾಮವನ್ನು ಬೀರುವ ಸಾಧ್ಯತೆಗಳು ಬಹಳ. ಅವರವರ ತೊಂದರೆಗೆ ಅನುಸಾರವಾಗಿ ಅವರಿಗೆ ಚಿಕಿತ್ಸೆ ಮತ್ತು ಆಪ್ತ ಸಮಾಲೋಚನೆ ನೀಡಲಾಗುತ್ತದೆ. ಅಂತಹ ಮಕ್ಕಳಿಗೆ ವಿಶೇಷ ಶಿಕ್ಷಣಕ್ಕೆ ಆದ್ಯತೆ ನೀಡಬೇಕು.



ಇದೆಲ್ಲಕ್ಕೂ ಮಿಗಿಲಾಗಿ ಅಂತಹ ಮಕ್ಕಳ ಪಾಲಕರು ತಮ್ಮ ಮಕ್ಕಳನ್ನು ಪಾಲಿಸಲು ಅವಶ್ಯಕವಾದ ತಿಳುವಳಿಕೆ ಮತ್ತು ತರಬೇತಿಗಳನ್ನು ತಾವೇ ಹೊಂದಿರಬೇಕಾದದ್ದು ಅತ್ಯಂತ ಸೂಕ್ತ ಮತ್ತು ಅನಿವಾರ್ಯ. ಬಾಯಿಂದ ಹೇಳಿದಷ್ಟು ಸುಲಭವಲ್ಲ ಅಂತಹ ಮಕ್ಕಳನ್ನು ಪರಿಪಾಲಿಸುವುದು. ಪಾಲಕರ ಸಹನೆಯಿಂದ ಕೂಡಿದ ಒಡನಾಟ ಮತ್ತು ಅವರು ಕೊಡ ಮಾಡುವ ಭದ್ರತೆಗಳು ಮಕ್ಕಳಲ್ಲಿ ಅಪಾರ ಆತ್ಮವಿಶ್ವಾಸವನ್ನು ಮೂಡಿಸುತ್ತದೆ. ತುಸು ಕಷ್ಟವಾದರೂ ಸೂಕ್ತ ಚಿಕಿತ್ಸೆ ಮತ್ತು ತರಬೇತಿ ದೊರೆತಲ್ಲಿ ಎ ಡಿ ಎಚ್ ಡಿ ತೊಂದರೆಯಿಂದ ಬಳಲುವ ಮಕ್ಕಳು ಸಾಮಾನ್ಯವಾದ ಬದುಕನ್ನು ನಡೆಸಲು ಸಾಧ್ಯವಾಗುತ್ತದೆ ಎಂಬುದು ಸಮಾಧಾನದ ಸಂಗತಿ.

ಮತ್ತೊಂದು ವಿಶೇಷವೆಂದರೆ ಈ ತೊಂದರೆಯಿಂದ ಬಳಲುವ ಮಕ್ಕಳು ದೈಹಿಕವಾಗಿ ಅಪಾರ ಶಕ್ತಿಯನ್ನು ಹೊಂದಿದ್ದು ಉತ್ತಮವಾದ ತರಬೇತಿ ನೀಡಿದಲ್ಲಿ ಒಳ್ಳೆಯ ಕ್ರೀಡಾಪಟುವಾಗುವ ಅರ್ಹತೆಯನ್ನು ಹೊಂದಿರುತ್ತಾರೆ. 2024ರ ಪ್ಯಾರಿಸ್ ಒಲಂಪಿಕ್ಸ್ ನಲ್ಲಿ ಪದಕ ವಿಜೇತರಲ್ಲಿ ಸಾಕಷ್ಟು ಜನ ಎ ಡಿ ಹೆಚ್ ಡಿ ತೊಂದರೆ ಉಳ್ಳವರಾಗಿದ್ದರು.

ಸ್ನೇಹಿತರೆ, ಎ ಡಿ ಎಚ್ ಡಿ ತೊಂದರೆಯಿಂದ ಬಳಲುತ್ತಿರುವ ಮಕ್ಕಳ ಪಾಲಕರು ಎರಡು ರೀತಿಯಲ್ಲಿ ಹೋರಾಟಗಳನ್ನು ಮಾಡಬೇಕಾಗುತ್ತದೆ.

ಮೊದಲು ಅವರ ಮಕ್ಕಳ ತೊಂದರೆಯ ಜೊತೆಗೆ ಜೀವನಪರ್ಯಂತದ ಸಹನಶೀಲ ಸ್ವಭಾವವನ್ನು ರೂಡಿಸಿಕೊಂಡು ಅವರನ್ನು ಬೆಳೆಸುವುದು. ಎರಡನೆಯದು ಸೋ ಕಾಲ್ಡ್ ಆರೋಗ್ಯವಂತ ಸಮಾಜದ ಜನರ ಅವಿವೇಕದ ವರ್ತನೆಯಿಂದ. ಈ ತೊಂದರೆಯಿಂದ ಬಳಲುತ್ತಿರುವ ಮಕ್ಕಳಿಗೆ ಮತ್ತು ಪಾಲಕರಿಗೆ ನಿಮ್ಮ ಸಹಾನುಭೂತಿಯ ಅವಶ್ಯಕತೆ ಇದೆಯೇ ಹೊರತು, ಹಿಂದಿನ ಜನ್ಮದ ಕರ್ಮಗಳನ್ನು ನೆನಪಿಸುವ ಹೀಯಾಳಿಕೆಯ ಮಾತುಗಳಲ್ಲ. ಈಗಾಗಲೇ ನೊಂದಿರುವ ಅವರ ಮನಸ್ಸಿಗೆ ಪ್ರಜ್ಞಾಪೂರ್ವಕವಾದ ನಮ್ಮ ಮಾತುಗಳು ತಂಪನ್ನೆರೆಯಲಿ, ಧೈರ್ಯ ಮತ್ತು ಭರವಸೆ ಮೂಡಿಸಲಿ ಎಂಬ ಆಶಯದೊಂದಿಗೆ..



## ಬಿ.ಎಡ್ ವಿದ್ಯಾರ್ಥಿಗಳು ಕ್ರೀಡಾ ಚಟುವಟಿಕೆಗಳಲ್ಲೂ ಪಾಲ್ಗೊಳ್ಳಬೇಕು



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮುಂದಿನ ಪೀಳಿಗೆಗೆ ದೈಹಿಕ ಆರೋಗ್ಯದ ಕುರಿತು ಅರಿವು ಮೂಡಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ ಎಂದು ಬಿ.ಎಲ್.ಡಿ.ಇ ಸಂಸ್ಥೆಯ ಆಡಳಿತಾಧಿಕಾರಿ ಡಾ. ವಿ. ಎಸ್. ಬಗಲಿ ಹೇಳಿದ್ದಾರೆ.

ಬುಧವಾರ ಬಿ. ಎಲ್. ಡಿ. ಇ ಸಂಸ್ಥೆಯ ಜೆ.ಎಸ್.ಎಸ್ ಶಿಕ್ಷಣ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿದ್ದ ವಿಜಯಪುರ ನಗರ ವಲಯ ಬಿ.ಎಡ್ ಕಾಲೇಜುಗಳ ಅಂತರ್ ಕಾಲೇಜು ವ್ಹಾಲಿಬಾಲ್ ಪಂದ್ಯಾವಳಿ ಉದ್ಘಾಟಿಸಿ ಅವರು ಮಾತನಾಡಿದರು.

ಬಿ.ಎಡ್ ವಿದ್ಯಾರ್ಥಿಗಳು ಶಿಕ್ಷಕ ವೃತ್ತಿಯ ಕಡೆಗೆ ಗಮನ ಹರಿಸುವುದರ ಜೊತೆಗೆ ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಮೂಲಕ ದೈಹಿಕವಾಗಿ ಸದೃಢರಾಗಲು ಇಂಥ ಪಂದ್ಯಾವಳಿಗಳಲ್ಲಿ ಭಾಗವಹಿಸಬೇಕು. ಆದರೆ, ಇತ್ತೀಚಿನ ದಿನಗಳಲ್ಲಿ ಇದು ಕಡಿಮೆಯಾಗುತ್ತಿದೆ ಎಂದು ಹೇಳಿದರು.

ಬಿ. ಎಲ್. ಡಿ. ಇ ಸಂಸ್ಥೆಯ ನಿರ್ದೇಶಕ ಮತ್ತು ದೈಹಿಕ ಶಿಕ್ಷಣ ಆಡಳಿತಾಧಿಕಾರಿ ಡಾ. ಎಸ್. ಎಸ್. ಕೋರಿ ಮಾತನಾಡಿ, ಇಂದಿನ ಯಾಂತ್ರಿಕ ಯುಗದಲ್ಲಿ ಜನರು ದೈಹಿಕ ಚಟುವಟಿಕೆಗಳ ಅಭಾವವನ್ನು ಎದುರಿಸುತ್ತಿದ್ದಾರೆ. ಕ್ರೀಡೆಗಳಲ್ಲಿ ಸೋಲು ಗೆಲುವಿಗಿಂತ ಭಾಗವಹಿಸುವಿಕೆ ಮುಖ್ಯವಾಗಿದೆ. ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಕ್ರೀಡಾ ಮನೋಭಾವ ಮತ್ತು ಉತ್ತಮ ವ್ಯಕ್ತಿತ್ವ ಬೆಳೆಯುತ್ತದೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಜೆ.ಎಸ್.ಎಸ್ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯೆ ಡಾ. ಬಿ. ವೈ. ಖಾಸನೀಸ, ಬಿ.ಎಲ್.ಡಿ.ಇ ಸಂಸ್ಥೆಯ ಆಡಳಿತಾಧಿಕಾರಿ ಐ. ಎಸ್. ಕಾಳಪ್ಪನವರ, ಐ.ಕ್ಯೂ.ಎ.ಸಿ ಸಂಯೋಜಕ ಡಾ. ಎಂ. ಎಸ್. ಹಿರೇಮಠ, ಸಹ ಪ್ರಾಧ್ಯಾಪಕ ಡಾ. ಎಂ. ಬಿ. ಕೋರಿ ಮಾತನಾಡಿದರು.

ಈ ಸಂದರ್ಭದಲ್ಲಿ ಡಾ. ಎಸ್. ಪಿ. ಶೇಗುಣಸಿ, ಎಸ್. ಎಸ್. ಪಾಟೀಲ, ವಿಜಯಪುರ ನಗರದ ಎಂಟು ಶಿಕ್ಷಣ ಮಹಾವಿದ್ಯಾಲಯಗಳ ಪ್ರಾಚಾರ್ಯರು, ದೈಹಿಕ ನಿರ್ದೇಶಕರು, ಕ್ರೀಡಾಪಟುಗಳು, ಕಾಲೇಜಿನ ಬೋಧಕ ಹಾಗೂ ಬೋಧಕರ ಹೊರತಾದ ಸಿಬ್ಬಂದಿ ಉಪಸ್ಥಿತರಿದ್ದರು.

## ಮಹಿಳಾ ವಿವಿ ಪತ್ರಿಕೋದ್ಯಮ ವಿಭಾಗ: ಅ.23ರಂದು ಭಾಷಣ ಸ್ಪರ್ಧೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ಅಧ್ಯಯನ ವಿಭಾಗದಲ್ಲಿ ಪದವಿ ಕಾಲೇಜುಗಳಲ್ಲಿ ಓದುತ್ತಿರುವ ವಿದ್ಯಾರ್ಥಿನಿಯರಿಗಾಗಿ ಇದೇ ತಿಂಗಳ ಅಕ್ಟೋಬರ್ 23ರಂದು ಬೆಳಿಗ್ಗೆ 11 ಗಂಟೆಗೆ "ವಿಕಸಿತ ಭಾರತ– ಯುವಜನರ ಪಾತ್ರ" ಕುರಿತ ಭಾಷಣ ಸ್ಪರ್ಧೆ ಏರ್ಪಡಿಸಲಾಗಿದೆ.

ಪದವಿ ಕಾಲೇಜುಗಳಲ್ಲಿ ಬಿ.ಎ., ಬಿ.ಕಾಂ, ಬಿಎಸ್‌ಸಿ, ಬಿಸಿಎ, ಬಿಬಿಎಂ ಮುಂತಾದ ಕೋರ್ಸ್‌ಗಳಲ್ಲಿ ಒಂದರಿಂದ ಆರನೆಯ ಸೆಮಿಸ್ಟರ್ ವರೆಗೆ ಓದುತ್ತಿರುವ ಅಥವಾ ಈ ವರ್ಷ 6ನೆಯ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗಿರುವ ವಿದ್ಯಾರ್ಥಿನಿಯರು ಈ ಭಾಷಣ ಸ್ಪರ್ಧೆಯಲ್ಲಿ ಭಾಗವಹಿಸಬಹುದು.

ಈ ಭಾಷಣ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ– ರೂ.1500, ದ್ವಿತೀಯ ಬಹುಮಾನ– ರೂ.1000 ಮತ್ತು ತೃತೀಯ ಬಹುಮಾನ– ರೂ.500 ರೂಪಾಯಿಗಳ ನಗದು ನೀಡಲಾಗುವುದು. ಅಲ್ಲದೇ ಐದು ಸಮಾಧಾನಕರ ಬಹುಮಾನಗಳನ್ನು ಕೂಡಾ ನೀಡಲಾಗುತ್ತದೆ. ಈ ಸ್ಪರ್ಧೆಯಲ್ಲಿ ಭಾಗವಹಿಸಲು ಇಚ್ಚಿಸುವ ವಿದ್ಯಾರ್ಥಿನಿಯರು ಲಿಂಕ್ ಬಳಸಿ ಹೆಸರು ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ಸಂದೀಪ್ ಮೊಬೈಲ್ ಸಂಖ್ಯೆ 9844681398 ಸಂಪರ್ಕಿಸಬಹುದು. ಇಲ್ಲವೇ ನೇರವಾಗಿ ಅಕ್ಟೋಬರ್ 23ರಂದು 10.45ರೊಳಗಾಗಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ಅಧ್ಯಯನ ವಿಭಾಗದಲ್ಲಿ ನೇರವಾಗಿ ಬಂದು ಹೆಸರು ನೋಂದಾಯಿಸಿಕೊಳ್ಳಬಹುದು ಎಂದು ವಿವಿ ಪ್ರಕಟಣೆ ತಿಳಿಸಿದೆ.

## ಕನ್ನಡ ನಾಡು–ನುಡಿ ಜಾಗೃತಿಗೊಳಿಸೋಣ : ಎಸಿ ಗದ್ವಾಳ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಕನ್ನಡ ನಾಡು, ನುಡಿ, ಭಾಷೆ, ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಜಾಗೃತಗೊಳಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕಾಗಿದೆ ಎಂದು ಕಂದಾಯ ಉಪವಿಭಾಗಾಧಿಕಾರಿ ಅಬೀದ್ ಗದ್ವಾಳ ಹೇಳಿದರು.

ಬುಧವಾರ ಪಟ್ಟಣದ ಹಂಜಗಿ ಕ್ರಾಸ್ ಹತ್ತಿರ ಹೊರ್ತಿಯಿಂದ ಆಗಮಿಸಿದ ಕನ್ನಡ ರಥಕ್ಕೆ ತಾಲೂಕಾ ಆಡಳಿತ ಮತ್ತು ಸಮಸ್ತ ಕನ್ನಡ ಪರ ಸಂಘಟನೆ ವತಿಯಿಂದ ಸ್ವಾಗತಿಸಿ ಅವರು ಮಾತನಾಡಿದರು.

ಆಡಳಿತದಲ್ಲಿ ಕನ್ನಡ ಹೆಚ್ಚು ಬಳಕೆ ಮಾಡಿ ಕನ್ನಡದ ಬೆಳವಣಿಗೆ ಮಾಡಬೇಕಾಗಿದೆ. ಬಳಕೆಯಲ್ಲಿ ಇದ್ದದ್ದು ಹೆಚ್ಚು ಉಳಿಯುತ್ತದೆ ಎಂದರು.

ವಿಜಯಪುರ ಜಿಲ್ಲಾ ಕಸಾಪ ಅಧ್ಯಕ್ಷ ಹಾಸಿಂಪೀರ ವಾಲಿಕಾರ ಮಾತನಾಡಿ, ಕರ್ನಾಟಕ ರಾಜ್ಯ ಜನಪದ, ಕಲೆ, ಸಾಹಿತ್ಯ ಮತ್ತು ಪ್ರಕೃತಿ ಸೌಂದರ್ಯದಲ್ಲಿ ಅಡಗಿದೆ. ಮಂಡ್ಯದಲ್ಲಿ ಅಖಿಲ ಭಾರತ ಕನ್ನಡ ಸಾಹಿತ್ಯ ಪರಿಷತ್ತು ಸಮ್ಮೇಲನ ನಡೆಯಲಿದ್ದು ಅದರ ಪ್ರಚಾರಾರ್ಥ ಮತ್ತು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡಿ 50 ವರ್ಷ ಆಗುತ್ತಿದ್ದು ಈ ದಿಶೆಯಲ್ಲಿ ರಥ ಸಾಗುತ್ತಿದ್ದು ಅದಕ್ಕೆ ಹೆಚ್ಚಿನ ಪ್ರಚಾರ ನೀಡಬೇಕಾಗಿದೆ ಎಂದರು.

ಕ್ಷೇತ್ರಶಿಕ್ಷಣಾದಿಕಾರಿ ಟಿ.ಎಸ್. ಅಲಗೂರ, ಕಸಾಪ ಇಂಡಿ ಘಟಕದ ಅಧ್ಯಕ್ಷ ರಾಘವೇಂದ್ರ ಕುಲಕರ್ಣಿ ಮಾತನಾಡಿದರು.

ಸಮಾರಂಭದಲ್ಲಿ ಡಾ. ರಾಜಕುಮಾರ ಅಡಕಿ, ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಹಂಗರಗಿ, ರಮೇಶ ನರಳೆ, ಜಾವೇದ ಬಾಗವಾನ, ಪುರಸಭೆ ಅಧ್ಯಕ್ಷ ಲಿಂಬಾಜಿ ರಾಠೋಡ, ಸಂಗಣ್ಣ ಭೈರಜಿ, ಕಜಾಪ ಅಧ್ಯಕ್ಷ ಆರ್.ವಿ. ಪಾಟೀಲ, ಸಂಜಯ ಚಟ್ಟರಕಿ, ಸತ್ಯಣ್ಣ ಹಡಪದ, ಕೆ.ಜಿ. ನಾಟಿಕಾರ, ಎಸ್.ಡಿ. ಕಲ್ಯಾಣಿ, ಎಸ್.ಆರ್. ಗದ್ಯಾಳ, ಪಿ.ಎಂ. ಮಠಪತಿ, ಸಿದರಾಯ ಆಲೂರ, ಜಾವೇದ ಮೋಮಿನ, ಜಟ್ಟೆಪ್ಪ ರವಳಿ, ಪ್ರಶಾಂತ ಕಾಳೆ, ಬಸವರಾಜ ಗೊರನಾಳ, ಬಿ.ವಾಯ್. ದಳವಾಯಿ, ಪ್ರದೀಪ ಪವಾರ, ಕರವೇ ಸ್ವಾಭಿಮಾನಿ ಬಣದ ಶಿವಾನಂದ ಬಡಿಗೇರ, ಧನಪಾಲಶೆಟ್ಟಿ ದೇವೂರ ಪಾರ್ವತಿ ಸೊನ್ನದ, ಸಿ.ಎಂ. ಕಾಳೆ, ಲಲಿತಾ ಮಾದರ, ಶಾರದಾ ಗಿರಣಿವಡ್ಡರ, ಜಯಶ್ರೀ ತೆಲಗ, ಸಾವಿತ್ರಿ ಮಣ್ಣೂರ, ಸುಲೋಚನಾ ಮಾದರ ಮತ್ತಿತರಿದ್ದರು.

## ಕನ್ನಡ ಜ್ಯೋತಿ ರಥಯಾತ್ರೆಗೆ ಸ್ವಾಗತ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಇಂದು ಪಟ್ಟಣಕ್ಕೆ ಆಗಮಿಸಿದ ಕನ್ನಡ ಜ್ಯೋತಿ ರಥಯಾತ್ರೆಗೆ ಅದ್ದೂರಿಯಾಗಿ ಸ್ವಾಗತಿಸಲಾಯಿತು.

ಪಟ್ಟಣದ ಅಂಬೇಡ್ಕರ್ ವೃತ್ತಕ್ಕೆ ಬುಧವಾರ ಸಾಯಂಕಾಲ ಆಗಮಿಸಿದ ಕನ್ನಡ ಜ್ಯೋತಿರಥ–ಯಾತ್ರೆಗೆ ತಾಲ್ಲೂಕು ಆಡಳಿತ, ಪಟ್ಟಣ ಹಾಗೂ ತಾಲ್ಲೂಕು ಪಂಚಾಯಿತಿ, ಕಸಾಪ, ಕರವೇ, ಜಯಕರ್ನಾಟಕ, ದಸಂಸ, ಶಿಕ್ಷಕರ ಸಂಘ, ಶರಣ ಸಾಹಿತ್ಯ ಪರಿಷತ್ ಸೇರಿದಂತೆ ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಸಾಂಪ್ರದಾಯಿಕವಾಗಿ ಸ್ವಾಗತಿಸಿ ಭುವನೇಶ್ವರಿ ಪ್ರತಿಮೆಗೆ ಪೂಜೆ ಸಲ್ಲಿಸಿ, ಆರತಿ ಎತ್ತಿ ಮಾಲಾರ್ಪಣೆ ಮಾಡಲಾಯಿತು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಹಾಸಿಂಪೀರ್ ವಾಲಿಕಾರ ಮಾತನಾಡಿ, ಕನ್ನಡ ನೆಲ, ಜಲ, ಭಾಷೆಯ ಜಾಗೃತಿಗಾಗಿ ಹಾಗೂ ಕನ್ನಡ ಸಾಹಿತ್ಯ ಸಮ್ಮೇಳನ ಹಾಗೂ ಜನರಲ್ಲಿ ಸಾಹಿತ್ಯಕ ಅಭಿಮಾನವನ್ನು ಮೂಡಿಸುವ ಅಂಗವಾಗಿ ರಾಜ್ಯಾದ್ಯಂತ ಕನ್ನಡ ಜ್ಯೋತಿ ರಥಯಾತ್ರೆ ಸಂಚರಿಸುತ್ತಿದೆ ಎಂದರು.

ತಹಶೀಲ್ದಾರ ಪ್ರಕಾಶ ಸಿಂದಗಿ, ವಿಜಯಪುರ ಅನುಗ್ರಹ ಆಸ್ಪತ್ರೆಯ ನೇತ್ರ ತಜ್ಞ ಪ್ರಭುಗೌಡ ಬಿ.ಎಲ್ (ಚಬನೂರ), ಕಸಾಪ ತಾಲ್ಲೂಕು ಅಧ್ಯಕ್ಷ ಜಿ.ಪಿ.ಬಿರಾದಾರ, ಸಿಂದಗಿ ತಾಲ್ಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಅಶೋಕ ತೆಲ್ಲೂರ ಮಾತನಾಡಿದರು.ನಂತರ ಕನ್ನಡ ಜ್ಯೋತಿ ರಥ–ವನ್ನು ಮೊಹರೆ ಹಣಮಂತ್ರಾಯ ವೃತ್ತದವರೆಗೆ ಮೆರವಣಿಗೆ ಮಾಡಿ ನಂತರ ಬಿಳ್ಕೊಡಲಾಯಿತು.

ತಾಲ್ಲೂಕು ಪಂಚಾಯಿತಿ ಇಓ ಭಾರತಿ ಚೆಲುವಯ್ಯ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಎಸ್. ಎಸ್. ಬಾಗಲಕೋಟ, ಸಿಂದಗಿ ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಬಿ.ಯಡ್ರಾಮಿ, ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಎಸ್.ಎನ್.ಬಸವರೆಡ್ಡಿ, ನಿವೃತ್ತ ನೌಕರರ ಸಂಘದ ಅಧ್ಯಕ್ಷ ಸಿ.ಕೆ.ಕುದರಿ, ತಾಲ್ಲೂಕು ಶಿಕ್ಷಕರ ಸಂಘದ ಅಧ್ಯಕ್ಷ ಎ.ಎಚ್.ವಾಲಿಕಾರ, ಅಭಿಷೇಕ ಚಕ್ರವರ್ತಿ, ಸಂಗಪ್ಪಣ್ಣ ತಡವಲ್,ಪಿ.ಜಿ.ಹಿರೇಮಠ, ಎಸ್.ಎಸ್.ಸಾತಿಹಾಳ, ಸಂಗನಗೌಡ ಬಿರಾದಾರ, ಮುರ್ತುಜಾ ತಾಂಬೋಳಿ, ಶಿವರಾಜ ತಳವಾರ, ರೆಹಮಾನ್ ಕಣಕಾಲ ಸೇರಿದಂತೆ ವಿವಿಧ ಸಂಘಟನೆಗಳ ಸದಸ್ಯರು ಇದ್ದರು.

## ಬಯಲು ಶೌಚಾಲಯ ಮುಕ್ತ ಸಮಾಜ ನಿರ್ಮಾಣಕ್ಕೆ ಜಾಗೃತಿ ಅಗತ್ಯ

■ ಉದಯರಶ್ಮಿ ದಿನಪತ್ರಿಕೆ




ಸಿಂದಗಿ: ತಾಪಂ ಹಾಗೂ ಜಿಲ್ಲಾ ಯೋಜನಾ ಪ್ರಾಧಿಕಾರ ಸ್ವಚ್ಛ ಭಾರತ ಯೋಜನೆಯಡಿಯಲ್ಲಿ ಬಯಲು ಮುಕ್ತ ಶೌಚಾಲಯ ನಿರ್ಮಾಣಕ್ಕೆ ಸಾರ್ವಜನಿಕರಿಗೆ ಹಾಗೂ ಸರಿಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಶೌಚಾಲಯಗಳನ್ನು ಕಟ್ಟಿಸಿ ಬಯಲು ಶೌಚಾಲಯ ಮುಕ್ತ ಸಮಾಜ ನಿರ್ಮಾಣಕ್ಕೆ ಹಲವಾರು ಯೋಜನೆಗಳನ್ನು ರೂಪಿಸುತ್ತದೆ ಅದನ್ನು ಜಾಗೃತಿ ಮೂಡಿಸುವ ಕೊರತೆಯಿಂದ ಅದು ಸಫಲತೆ ಕಾಣುತ್ತಿಲ್ಲ ಎಂದು ಲೋಕಾಯುಕ್ತ ಎಸ್‌ಪಿ ಟಿ.ಮಲ್ಲೇಶ ಎಚ್ಚರಿಕೆ ನೀಡಿದರು.

ಪಟ್ಟಣದ ತಾಪಂ ಕಾರ್ಯಾಲಯದ ಸಭಾ ಭವನದಲ್ಲಿ ಲೋಕಾಯುಕ್ತರು ಸಾರ್ವಜನಿಕರ ಅಹವಾಲ ಹಾಗೂ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿ, ಸರಕಾರ ಸಾರ್ವಜನಿಕರಿಗಾಗಿ ಹಲವಾರು ಯೋಜನೆಗಳನ್ನು ರೂಪಿಸುತ್ತಿದೆ ಅದು ಪಾರದರ್ಶಕ ಹಾಗೂ ಸಮರ್ಪಕವಾಗಿ ಭ್ರಷ್ಟಾಚಾರ ರಹಿತ ಸೌಲಭ್ಯಗಳು ಮುಟ್ಟಿದೆ ಅಥವಾ ಇಲ್ಲವೋ ಎಂಬದನ್ನು ನಿಗಾ ವಹಿಸಲು ಲೋಕಾಯುಕ್ತ ಇಲಾಖೆಗೆ ಅಧಿಕಾರವಿದೆ ಕಾರಣ ಸೌಲಭ್ಯಗಳು ಸಮರ್ಪಕವಾಗಿ ಮುಟ್ಟಿಸುವಲ್ಲಿ ಲೋಪವಾದರೆ ಕರ್ತವ್ಯ ನಿರ್ಲಕ್ಷ್ಯ ಕಾಯ್ದೆಯಡಿ ಪ್ರಕರಣ ದಾಖಲಾಗುತ್ತದೆ. ಕಾರಣ ಶಾಲೆಗಳಲ್ಲಿ ಮಕ್ಕಳಿಗೆ ಬಿಇಓ, ಶಿಶು ಅಭಿವೃದ್ಧಿ ಇಲಾಖೆಗಳ ಸಹಯೋಗದಲ್ಲಿ ಈ ಕಾರ್ಯಕ್ರಮದ ಅರಿವು ಮೂಡಬೇಕು, ಅಲ್ಲದೆ ವಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ಸರಕಾರಿ ಆಪ್ ಇದೆ ಅದರ ಮೂಲಕ ಸಾರ್ವಜನಿಕರು ಅರ್ಜಿ ಸಲ್ಲಿಸಿ ಇದರ ಸದುಪಯೋಗ ಪಡೆದುಕೊಳ್ಳಿ ಎಂದು ತಿಳಿಸಿದರು.

ಜಿಪಂ ಕಾರ್ಯನಿರ್ವಾಹಕ ಅಧಿಕಾರಿ ಜಿ.ವೈ.ಮುರಾಳ ಮಾತನಾಡಿ, ಈ ಕ್ಷೇತ್ರದಲ್ಲಿ 4 ಆರ್.ಎಂಎಸ್‌ಎ 4 ಶಾಲೆಗಳು ಮಂಜೂರಾಗಿದ್ದು. 18 ಅಂಗನವಾಡಿ ಕೇಂದ್ರಗಳ ನಿರ್ಮಾಣಕ್ಕೆ ವರ್ಕಾಡರ ನೀಡಿದ್ದು 13 ಪೂರ್ಣಗೊಂಡಿವೆ ಇನ್ನೂಳಿದವುಗಳು ನಿರ್ಮಾಣ ಹಂತದಲ್ಲಿವೆ. 2023ನೇ ಸಾಲಿನಲ್ಲಿ 38 ಶಾಲೆಗಳ ರಿಪೇರಿಗಾಗಿ ಅನುಧಾನ ಬಂದಿದ್ದು ಕಾಮಗಾರಿ ಕೈಕೊಳ್ಳಲಾಗುವುದು. ಎಂದು ಹೇಳುತ್ತಿದಂತೆ ಯಾವ ಶಾಲೆಗಳಿಗೆ ಶೌಚಾಲಯಗಳಿಲ್ಲ ಮತ್ತು ಮಾಸ್‌ಕ್ಟೋನ್ ಅಳವಡಿಕೆಗೆ ಪ್ರಸ್ತಾವನೆ ಸಲ್ಲಿಸುವಂತೆ ಲೋಕಾಯುಕ್ತ ಉಪ ಲೋಕಾಯುಕ್ತ ಸುರೇಶ ರಡ್ಡಿ ಅವರು ಸೂಚಿಸಿದರು.

ಸಮಾಜ ಕಲ್ಯಾಣಾಧಿಕಾರಿ ಭವಾನಿ ಪಾಟೀಲ ಮಾಹಿತಿ ನೀಡಿ, ಒಟ್ಟು 17 ವಸತಿ ನಿಲಯಗಳಿದ್ದು ಅದರಲ್ಲಿ 1537 ವಿದ್ಯಾರ್ಥಿಗಳಲ್ಲಿ 484 ವಿದ್ಯಾರ್ಥಿನಿಯರಿದ್ದಾರೆ ಎಂದು ಹೇಳುತ್ತಿದಂತೆ ವಸತಿ ನಿಲಯಗಳು ಅವವ್ಯವಸ್ಥೆಯ ಆಗರ ಎನ್ನುವ ವರದಿಗಳು ಕೆಲವು ಕಡೆಗಳಲ್ಲಿ ಕೇಳಿ ಬರುತ್ತಿವೆ ಮತ್ತು ವಿದ್ಯಾರ್ಥಿನಿಯರಿಗೆ ನಿಮಗೆ ತಿಳಿಯದ ಹಾಗೆ ಕೆಲವೊಂದು ಕ್ರೀಯೇ ನೆಡಯುತ್ತವೆ ಹೆಣ್ಣು ಮಕ್ಕಳು ಹೇಳಿಕೊಳ್ಳದೆ ಶಾಲೆ ಬಿಟ್ಟ ಪ್ರಕರಣಗಳಿಗೆ ಅದಕ್ಕೆ ಗುಡ್‌ಟಚ್, ಬ್ಯಾಡ್‌ಟಚ್ ಪ್ರಕರಣಗಳು ಬೆಳಕಿಗೆ ಬಂದಿವೆಯಾ ಅಂತವರ ವಿರುದ್ಧ ಪ್ರಕರಣ ದಾಖಲಿಸಿ ಎಂದು ನಿರ್ದೇಶನ ನೀಡಿದರು.

ಅಬಕಾರಿ ಇಲಾಖೆಯ ಟಾರ್‍ಗೇಟ್‌ಗೋಸ್ಕರ ಒತ್ತಡ ಹೆರುವುದರಿಂದ ಗ್ರಾಮೀಣ ಬಾಗದಲ್ಲಿ ಎಲ್ಲೇಂದರಲ್ಲಿ ಅಕ್ರಮವಾಗಿ ಸರಾಯಿ ಮಾರಾಟವಾಗುತ್ತಿದೆ ಇದರಿಂದ ಯುವಕರ ಮತ್ತು ಮಕ್ಕಳ ಮೇಲೆ ಪರಿಣಾಮ ಬಿರುತ್ತಿದೆ ಕಾರಣ 32,34 ಕಾಯ್ದೆಯಡಿ ಪ್ರಕರಣ ದಾಖಲಿಸಿ ಎಂದು ಅಬಕಾರಿ ಅಧಿಕಾರಿ ದಿಲೀಪಸಿಂಗ್ ರಜಪೂತ ಅವರಿಗೆ ಸೂಚನೆ ನೀಡಿದರು.

ಸಾರ್ವಜನಿಕರಿಂದ 18 ಅಹವಾಲುಗಳನ್ನು ಸ್ವೀಕರಿಸಿ ಇಡೀ ಜಿಲ್ಲೆಯಲ್ಲಿಯೇ ಸಿಂದಗಿ ಪುರಸಭೆಯಲ್ಲಿ ಅತೀ ಹೆಚ್ಚು ಸಮಸ್ಯೆಗಳಿಗೆ ಎನ್ನುವುದು ಜಗಜಾಹಿರು ಆಗಿವೆ ಇದಕ್ಕೆ ಅಧಿಕಾರಿಗಳ ನಿರ್ಲಕ್ಷ ವೇ ಕಾರಣವಾಗಿದೆ ಸರಕಾರಿ ಸೇವೆ ಸೇರುವಾಗ ನಾನು ಸರಕಾರಿ ಅಧಿಕಾರಿಯಾಗಿ ಸೇವೆ ಸಲ್ಲಿಸದೇ ಜನರ ಸೇವಕನಾಗಿ ಸೇವೆ ಸಲ್ಲಿಸುತ್ತೇನೆ ಎಂದು ಪ್ರಮಾಣಿಕರಿಸುತ್ತಿರಿ ಅದನ್ನು ಕಾರ್ಯರೂಪದಲ್ಲಿ ತನ್ನಿ ಎಂದರು.

ತಾಲೂಕಿನಲ್ಲಿ ರೈತರು ಅತೀ ಹೆಚ್ಚು ರೇಷ್ಮೇ ಬೆಳೆ ಬೆಳೆಯುವಂತೆ ಜಾಗೃತಿ ಮೂಡಿಸಬೇಕು ಸಹಾಯಕ ನಿರ್ದೇಶಕರಿಗೆ ಸಲಹೆ ನೀಡಿದರು.

ಬಿಸಿಊಟ, ಶಿಕ್ಷಣ ಇಲಾಖೆ, ಹೆಸ್ಕಾಂ, ಕಾರ್ಮಿಕ ಕೆಎಸ್‌ಆರ್‌ಟಿಸಿ, ಅಗ್ನಿಶಾಮಕ, ಅರಣ್ಯ ಇಲಾಖೆ, ಪಶು ಸಂಗೋಪನೆ, ಕೃಷಿ ಇಲಾಖೆ, ತೋಟಗಾರಿಕೆ, ಹಿಂದೂಳಿದ ವರ್ಗಗಳ ಇಲಾಖೆ, ಮಹಿಳಾ ಮತ್ತು ಮಕ್ಕಳ ಇಲಾಖೆ, ಲೋಕೋಪಯೋಗಿ ಇಲಾಖೆ ಸೇರಿದಂತೆ ವಿವಿದ ಇಲಾಖೆಗಳ ವಿವರಣೆ ಪಡೆದರು

ಇದೇ ಸಂದರ್ಭದಲ್ಲಿ ತಾಪಂ ಇಓ ರಾಮುಅಗ್ನಿ,ತಹಶೀಲ್ದಾರಪ್ರದೀಪಕುಮಾರ ಹಿರೇಮಠ, ಲೋಕಾಯುಕ್ತ ಸಿಪಿಆಯ್ ಆನಂದ ಡೋಣಿ ಸೇರಿದಂತೆ ಹಲವರು ಇದ್ದರು.

## ಚನ್ನಬಸವಣ್ಣನವರ ಕರಣ ಹಸಿಗೆ ವೈಜ್ಞಾನಿಕವಾಗಿದೆ :ಸಿದ್ದಲಿಂಗ ಶ್ರೀ



■ ಉದಯರಶ್ಮಿ ದಿನಪತ್ರಿಕೆ

ಬಸವನಬಾಗೇವಾಡಿ: 12 ನೇ ಶತಮಾನದ ಅವಿರಳಜ್ಞಾನಿ ಚನ್ನಬಸವಣ್ಣನವರ ಕರಣ ಹಸಿಗೆಯಲ್ಲಿ ನಮ್ಮ ದೇಹದ ಪ್ರತಿಯೊಂದು ಅಂಗಗಳ ಬಗ್ಗೆ ವೈಜ್ಞಾನಿಕವಾಗಿ ನಿರೂಪಿಸಲಾಗಿದೆ. ಎಲ್ಲ ಧರ್ಮದವರಿಗೂ ಅನ್ವಯವಾಗುವ ಕರಣ ಹಸಿಗೆ ಅರಿತುಕೊಂಡರೆ ಎಲ್ಲರೂ ಆರೋಗ್ಯಕರವಾದ ಜೀವನ ನಡೆಸಲು ಪೂರಕವಾಗುತ್ತದೆ ಎಂದು ಸ್ಥಳೀಯ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ಹೇಳಿದರು.

ಪಟ್ಟಣದ ಸಮೀಪವಿರುವ ಐತಿಹಾಸಿಕ ಹೋರಿಮಟ್ಟಿ ಗುಡ್ಡದಲ್ಲಿ ಇಂಗಳೇಶ್ವರ ಗ್ರಾಮದ ವಚನ ಶಿಲಾ ಮಂಟಪದ ಚನ್ನಬಸವ ಸ್ವಾಮೀಜಿಗಳಿಂದ ಹನ್ನೊಂದು ದಿನಗಳ ಕಾಲ ಜರುಗಿದ ಚನ್ನಬಸವಣ್ಣನವರ ಕರಣ ಹಸಿಗೆ ಪ್ರವಚನದ ಮುಕ್ತಾಯ ಸಮಾರೋಪದಂಗವಾಗಿ ಸೋಮವಾರ ಜರುಗಿದ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಕರಣ ಹಸಿಗೆ ಯಾವುದೇ ಜನಾಂಗ, ಯಾವುದೇ ಧರ್ಮಕ್ಕೆ ಸಿಮೀತವಾಗಿರದೇ ಎಲ್ಲ ಧರ್ಮ, ಜನಾಂಗದವರಿಗೆ ಅನ್ವಯವಾಗುತ್ತದೆ.

ಇದು ಇಂದಿನ ವೈದ್ಯಕೀಯ, ವಿಜ್ಞಾನ ಲೋಕಕ್ಕೆ ಇಂದಿಗೂ ಸವಾಲಾಗಿದೆ ನಿಂತಿದೆ. ದೇಹದ ಪ್ರತಿಯೊಂದು ಭಾಗಗಳನ್ನು ವೈಜ್ಞಾನಿಕ ಹಿನ್ನೆಲೆಯಲ್ಲಿ ಕರಣ ಹಸಿಗೆಯಲ್ಲಿ ನಿರೂಪಿಸಲ್ಪಟ್ಟಿವೆ. ಇಂತಹ ಕರಣ ಹಸಿಗೆಯನ್ನು ಸಾಮಾನ್ಯ ಜನರಿಗೂ ತಿಳಿಯುವ ರೀತಿಯಲ್ಲಿ ಪ್ರವನಚನಗೈದಿರುವ ಹಿರಿಯ ಸ್ವಾಮೀಜಿಗಳಾದ ಚನ್ನಬಸವ ಸ್ವಾಮೀಜಿಗಳು ನಮಗೆ ತಿಳಿಸಿಕೊಟ್ಟಿದ್ದಾರೆ. ಇವರನ್ನು ಪಡೆದ ನಾವೆಲ್ಲರೂ ತುಂಬಾ ಭಾಗ್ಯಶಾಲಿಗಳು ಎಂದು ಹೇಳಿದರು.

ಚಡಚಣದ ವಿರಕ್ತಮಠದ ಮಲ್ಲಿಕಾರ್ಜುನ ಸ್ವಾಮೀಜಿ ಮಾತನಾಡಿ, ಬಸವಾದಿ ಶರಣರು ನಾಡಿಗೆ ಕೊಟ್ಟ ಕೊಡುಗೆಯನ್ನು ನಾವೆಂದೂ ಮರೆಯಬಾರದು. ವೈಜ್ಞಾನಿಕ ತಳಹದಿಯ ಮೇಲೆ ಹೊಸ ಆಲೋಚನೆಗಳನ್ನು ನಮಗೆಲ್ಲರಿಗೂ ಕೊಟ್ಟಿದ್ದಾರೆ. ಬಸವಣ್ಣನವರ ವಿಚಾರಗಳು ಮನುಕುಲಕ್ಕೆ ಇಂದು ತುಂಬಾ ಅಗತ್ಯವಿದೆ ಎಂದರು.

ಮಸಬಿನಾಳದ ಸಿದ್ದರಾಮ ಸ್ವಾಮೀಜಿ ಮಾತನಾಡಿ, ಬಸವೇಶ್ವರರ ವಿಚಾರಗಳನ್ನು ಕೇವಲ ಬಾಯಿ ಮಾತಿನಿಂದ ಹೇಳಿದರೆ ಸಾಲದು. ಅವುಗಳನ್ನು ನಾವು ಬದುಕಿನಲ್ಲಿ ಅಳವಡಿಸಿಕೊಂಡಾಗ ಮಾತ್ರ ಅವರಿಗೆ ನಿಜವಾಗಿ ಗೌರವ ಸಲ್ಲಿಸಿದಂತಾಗುತ್ತದೆ ಎಂದರು.

ಪ್ರವಚನಕಾರ, ಇಂಗಳೇಶ್ವರದ ಚನ್ನಬಸವ ಸ್ವಾಮೀಜಿ ಮಾತನಾಡಿ, ಚನ್ನಬಸವಣ್ಣನವರು ಕೊಟ್ಟಿರುವ ಜ್ಞಾನವನ್ನು ಜಗತ್ತಿನಲ್ಲಿ ಯಾವ ದಾರ್ಶನಿಕರು ಇಂದಿಗೂ ನಮಗೆ ಕೊಡಲು ಸಾಧ್ಯವಾಗಿಲ್ಲ. ಚನ್ನಬಸವಣ್ಣನವರ ವಿಚಾರಗಳನ್ನು ನಮಗೆಲ್ಲ ತಿಳಿಸಲು ಸಹಾಯ ಮಾಡಿದ ವಚನ ಪಿತಾಮಹ ಫ.ಗು. ಹಳಕಟ್ಟಿ ಅವರನ್ನು ನಾವು ಎಂದಿಗೂ ಮರೆಯಬಾರದು. ಶರಣರ ವಿಚಾರಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳುವ ಮೂಲಕ ನಮ್ಮ ಬದುಕನ್ನು ಸುಂದರಗೊಳಿಸಿಕೊಳ್ಳಬೇಕೆಂದರು.

ವಿಪಿಕೆಪಿಎಸ್ ಬ್ಯಾಂಕ್ ಅಧ್ಯಕ್ಷ ಸಂಗನಗೌಡ ಚಿಕ್ಕೊಂಡ, ನಿವೃತ್ತ ಶಿಕ್ಷಕ ಎಂ.ಜಿ.ಆದಿಗೊಂಡ ಮಾತನಾಡಿದರು. ಡಾ.ಮಹಾಂತೇಶ ಮಡಿಕೇಶ್ವರ, ಬಸಮ್ಮ ಹಂಜಗಿ, ಸಂಗಯ್ಯ ಕಾಳಹಸ್ತೇಶ್ವರಮಠ ಅವರು ತಮ್ಮ ಅನಿಸಿಕೆ ಹಂಚಿಕೆಕೊಂಡರು.

ವೇದಿಕೆಯಲ್ಲಿ ಪಡೇಕನೂರದ ಮಲ್ಲಿಕಾರ್ಜುನ ಸ್ವಾಮೀಜಿ, ಇಟಗಿಯ ಗುರುಶಾಂತವೀರ ಸ್ವಾಮೀಜಿ ಇದ್ದರು. ಶರಣು ಬಸ್ತಾಳ ವಚನ ಪ್ರಾರ್ಥನೆ ಮಾಡುವ ಜೊತೆಗೆ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

ಇದೇ ಸಂದರ್ಭದಲ್ಲಿ ಪ್ರಭಾಕರ ಖೇಡದ, ಕೊಟ್ರೇಶ ಹೆಗ್ಡಾಳ, ಶರಣು ಬಸ್ತಾಳ, ವೀರಣ್ಣ ಮರ್ತುರ, ಪ್ರವಚನ ಕಾರ್ಯಕ್ರಮದಲ್ಲಿ ನಿತ್ಯ ದಾಸೋಹದ ಕಾರ್ಯ ನೆರವೇರಿಸಿದವರನ್ನು ಸೇರಿದಂತೆ ಇತರರನ್ನು ಸನ್ಮಾನಿಸಲಾಯಿತು.

## ಮಹಿಳೆಯರ ಸಬಲಿಕರಣಕ್ಕೆ ಹೆಚ್ಚಿನ ಒತ್ತು :ಸಂತೋಷ ಕುಮಾರ ರೈ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ವತಿಯಿಂದ ರಾಜ್ಯಾದ್ಯಂತ ಅನೇಕ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಅದರಲ್ಲೂ ಮಹಿಳೆಯರ ಸಬಲಿಕರಣಕ್ಕೆ ಹೆಚ್ಚಿನ ಆದ್ಯತೆಯನ್ನು ನೀಡಲಾಗುತ್ತಿದೆ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿಯ ಜಿಲ್ಲಾ ನಿರ್ದೇಶಕರಾದ ಸಂತೋಷ ಕುಮಾರ ರೈ. ಅವರು ಹೇಳಿದರು.

ಚಡಚಣ ಪಟ್ಟಣದ ಗೋಡಿಹಾಳ ರಸ್ತೆಯಲ್ಲಿರುವ ಶ್ರೀ ಗುರು ಕೃಪಾ ಮಂಗಲ ಕಾರ್ಯಾಲಯದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ(ರಿ) ಇಂಡಿ ಇವರು ಹಮ್ಮಿಕೊಂಡಿದ್ದ ತಾಲೂಕು ಮಟ್ಟದ ಒಕ್ಕೂಟದ ಪದಾಧಿಕಾರಿಗಳ ಸಮಾವೇಶವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಡತನ ರೇಖೆಯಲ್ಲಿರುವ ಗ್ರಾಮೀಣ ಭಾಗದ ಮಹಿಳೆಯರ ಜೀವನ ಮಟ್ಟವನ್ನು ಸುಧಾರಿಸುತ್ತಿದೆ. ಮಹಿಳೆಯರು ಸಂಘದಿಂದ ಸಾಲ–ಸೌಲಭ್ಯವನ್ನು ಪಡೆದು ಕಾಲಮಿತಿಯಲ್ಲೇ ಸರಿಯಾಗಿ ಸಾಲ ಮರುಪಾವತಿಸುವ ಮೂಲಕ ಹೆಚ್ಚಿನ ಸಾಲ ಪಡೆಯಲು ಅವಕಾಶ ಕಲ್ಪಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾಶೀಬಾಯಿ ವಾಲಿಕಾರ ಅವರು, ಗ್ರಾಮಾಭಿವೃದ್ಧಿ ಯೋಜನೆಯ ಸದಸ್ಯರಾದ ಮೇಲೆ ಮಹಿಳೆಯರು ಸ್ವಾವಲಂಬಿ ಜೀವನ ಸಾಗಿಸುತ್ತಿದ್ದಾರೆ. ಇದರಿಂದ ಸಮಾಜದ ಮುಖ್ಯ ವಾಹಿನಿಗೆ ಮಹಿಳೆಯರು ಬರಲು ಸಾಧ್ಯವಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಇಂಡಿ ತಾಲೂಕು ಕ್ಷೇತ್ರ ಯೋಜನಾಧಿಕಾರಿ ನಟರಾಜ ಐ.ಓ ಮಾತನಾಡಿ, ತಾಲೂಕಿನಲ್ಲಿ ಯೋಜನೆಯಿಂದ ನೀಡಿರುವ ಸೌಲಭ್ಯಗಳ ಕುರಿತು ಮಾಹಿತಿ ನೀಡುವ ಮೂಲಕ ಸಂಘಗಳ ಗುಣಮಟ್ಟವನ್ನು ಕಾಪಾಡಿಕೊಳ್ಳುವಲ್ಲಿ ಪದಾಧಿಕಾರಿಗಳ ಪಾತ್ರ ಬಹಳ ಮುಖ್ಯ ಎಂದು ಹೇಳಿದರು.

ಈ ವೇಳೆ ಜವಳಿ ವರ್ತಕರಾದ ಅಜೀತ ಮುತ್ತಿನ, ನಿವರಗಿಯ ಬ್ಯಾಂಕ ಆಫ್ ಬರೋಡಾ ಶಾಖೆಯ ಸಹಾಯಕ ವ್ಯವಸ್ಥಾಪಕ ವಿಜಯಕುಮಾರ, ಪತ್ರಕರ್ತರಾದ ಸಂಗಮೇಶ ಹೂಗಾರ, ಜಿಲ್ಲಾ ಜನಜಾಗೃತಿ ಸದಸ್ಯರಾದ ರುದ್ರಪ್ಪ ಪೂಜಾರಿ, ಮಾದೇವ ಬಿರಾದಾರ, ಶಿವಣ್ಣ ಪಾಂಡ್ರೆ, ವಲಯಾಧಿಕಾರಿ ಜಗದೇಶ ಕುಂಬಾರ ಸೇರಿದಂತೆ ವಿವಿಧ ಹಂತದ ಅಧಿಕಾರಿಗಳು, ಸೇವಾ ಪ್ರತಿನಿಧಿಗಳು, ವಿವಿಧ ಒಕ್ಕೂಟಗಳ ಸರ್ವ ಸದಸ್ಯರು ಉಪಸ್ಥಿತರಿದ್ದರು.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR